# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 294 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 14–06–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 294 | Title- Code: KARKAN 28269 | Chitradurga | Date: 14-06-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಾರ್ವಜನಿಕರು ಪ್ರೇರಣೆ ಅತ್ಯಗತ್ಯ: ಡಿಸಿ 2

ಜಿಲ್ಲಾಸ್ಪತ್ರೆಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಭೇಟಿ 3

10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಗೆ ಸಿದ್ಧತೆ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಜಪ್ತಿ ಮಾಡಿಕೊಂಡ ಅಕ್ಕಿ ಬಹಿರಂಗ ಹರಾಜು

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನಲ್ಲಿ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದ 40.21 ಕ್ವಿಂ. ಪಡಿತರ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದ್ದು, ಈ ರೀತಿ ವಶಪಡಿಸಿಕೊಂಡ ಅಕ್ಕಿಯನ್ನು ಜಿಲ್ಲಾಧಿಕಾರಿಗಳ ಸೂಚನೆಯಂತೆ ಜೂ.28 ರಂದು ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ತಾಲ್ಲೂಕಿನ ಟಿಎಪಿಎಂಸಿ. ಗೋದಾಮು ನಂ. 01 ಇಲ್ಲಿ ಬಹಿರಂಗ ಹರಾಜು ಮಾಡಲಾಗುವುದು, ಆಸಕ್ತ ವ್ಯಾಪಾರಸ್ಥರು ಹರಾಜಿನಲ್ಲಿ ಭಾಗವಹಿಸಬಹುದು ಎಂದು ಚಿತ್ರದುರ್ಗ ತಹಸಿಲ್ದಾರ್ ನಾಗವೇಣಿ ಅವರು ತಿಳಿಸಿದ್ದಾರೆ. ಕಳೆದ 2022 ರ ಏಪ್ರಿಲ್ 05 ರಂದು ಚಿತ್ರದುರ್ಗ ನಗರದ ಹೊರವಲಯದಲ್ಲಿನ ಮೆದೇಹಳ್ಳಿ ರಸ್ತೆಯಲ್ಲಿರುವ ಸೆಕ್ರಟರಿ ತಿಮ್ಮಣ್ಣ ಬಡಾವಣೆಯ ಖಾಲಿ ಜಾಗದಲ್ಲಿ ಯಾವುದೇ ಪರವಾನಗಿ ಇಲ್ಲದೆ ಇರುವ ವಾಹನದಲ್ಲಿ 40.21 ಕ್ವಿಂ. ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಾಗಾಣಿಕೆ ಮಾಡಲಾಗುತ್ತಿತ್ತು. ಅಕ್ರಮ ಸಾಗಾಣಿಕೆಯನ್ನು ಪತ್ತೆ ಹಚ್ಚಿದ ಅಧಿಕಾರಿಗಳು, 40.21 ಕ್ವಿಂ. ಪಡಿತರ ಅಕ್ಕಿಯನ್ನು ವಶಕ್ಕೆ ಪಡೆದುಕೊಂಡಿದ್ದರು. ಜಿಲ್ಲಾಧಿಕಾರಿಗಳ ಸೂಚನೆಯಂತೆ ಜೂ.28 ರಂದು ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ತಾಲ್ಲೂಕಿನ ಟಿಎಪಿಎಂಸಿ. ಗೋದಾಮು ನಂ. 01 ಇಲ್ಲಿ ಬಹಿರಂಗ ಹರಾಜು ನಡೆಸಲಾಗುವುದು. ಪ್ರತಿ ಕ್ವಿಂಟಾಲ್ ಅಕ್ಕಿಗೆ ರೂ. 2335 ಕನಿಷ್ಟ ದರ ನಿಗದಿಪಡಿಸಲಾಗಿದೆ. ಆಸಕ್ತ ವ್ಯಾಪಾರಸ್ತರು 20 ಸಾವಿರ ರೂ. ಮುಂಗಡ ಠೇವಣಿಯನ್ನು ಡಿಡಿ ರೂಪದಲ್ಲಿ ಪಾವತಿಸಿ, ಹರಾಜಿನಲ್ಲಿ ಭಾಗವಹಿಸಬಹುದು. ಹೆಚ್ಚಿನ ವಿವರಗಳನ್ನು ಚಿತ್ರದುರ್ಗ ತಹಸಿಲ್ದಾರರ ಕಚೇರಿಯಿಂದ ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಜೂನ್ 15ರಂದು ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಸಮಾರಂಭ

» ಚಿತ್ರದುರ್ಗ

ಜಿಲ್ಲಾಡಳಿತ, ಅರಣ್ಯ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಚಿತ್ರದುರ್ಗ ಪ್ರಾದೇಶಿಕ ಕಛೇರಿ ಇವರ ಸಂಯುಕ್ತಾಶ್ರಯದಲ್ಲಿ ಇದೇ ಜೂನ್ 15 ರಂದು ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಪಂಚಾಯತ್ ಕಚೇರಿ ಹತ್ತಿರದ ಕ್ರೀಡಾ ಸಭಾಂಗಣದಲ್ಲಿ ವಿಶ್ವ ಪರಿಸರ ದಿನಾಚರಣೆ–2024ರ ಅಂಗವಾಗಿ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕಾರ್ಯಕ್ರಮ ಉದ್ಘಾಟಿಸುವರು. ದಾವಣಗೆರೆ ವಲಯ ಕಚೇರಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಹಿರಿಯ ಪರಿಸರ ಅಧಿಕಾರಿ ರಮೇಶ್ ಡಿ ನಾಯಕ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಉಪ ಸಂರಕ್ಷಣಾಧಿಕಾರಿ ಟಿ.ರಾಜಣ್ಣ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ನಾಸಿರುದ್ದೀನ್ ಭಾಗವಹಿಸುವರು ಪರಿಸರ ಅಧಿಕಾರಿಗಳು ತಿಳಿಸಿದ್ದಾರೆ.

### ಉಚಿತ ತರಬೇತಿ

» ಚಿತ್ರದುರ್ಗ

ಜ್ಞಾನ ಸೌರಭ ನವೋದಯ ಕೋಚಿಂಗ್ ಸೆಂಟರ್ ವತಿಯಿಂದ ನಾಲ್ಕು ಮತ್ತು ಐದನೆ ತರಗತಿ ವಿದ್ಯಾರ್ಥಿಗಳಿಗೆ ನವೋದಯ ಪರೀಕ್ಷೆಗೆ ಕನ್ನಡ ಹಾಗೂ ಇಂಗ್ಲಿಷ್ ಮಾಧ್ಯಮದಲ್ಲಿ ಜೂ. 16 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 12–30 ರವರೆಗೆ ಎಸ್.ಆರ್.ಬಿ.ಎಂ.ಎಸ್. ರೋಟರಿ ಶಾಲೆಯಲ್ಲಿ ಉಚಿತ ತರಬೇತಿಯನ್ನು ನೀಡಲಾಗುವುದು.ನವೋದಯ ಏನು? ಏಕೆ? ಹೇಗೆ? ಎನ್ನುವ ಕುರಿತು ನೀಡಲಾಗುವ ತರಬೇತಿಯಲ್ಲಿ ನವೋದಯ ಕೈಪಿಡಿಯನ್ನು ಉಚಿತವಾಗಿ ವಿತರಿಸಲಾಗುವುದು.

## ನಟ ದರ್ಶನ್ ಮತ್ತವರ ಗ್ಯಾಂಗ್‌ಗೆ ಕಠಿಣ ಶಿಕ್ಷೆ ವಿಧಿಸುವಂತೆ ವಿವಿಧ ಸಂಘಟನೆಗಳಿಂದ ಪ್ರತಿಭಟನೆ

# ಪ್ರತಿಭಟನೆ ಮಾಡಿದ್ದಕ್ಕೆ ಬಂತು ತಿಪ್ಪಾರೆಡ್ಡಿಗೆ ಬೆದರಿಕೆ

» ಚಿತ್ರದುರ್ಗ


ರೇಣುಕಾಸ್ವಾಮಿ ಕೊಲೆ ಖಂಡಿಸಿ, ಅವರ ಕುಟುಂಬಕ್ಕೆ ನ್ಯಾಯ ಕೊಡಿಸಲು ಒತ್ತಾಯಿಸಿ ಪ್ರತಿಭಟನೆ ನಡೆಸಿದ್ದಕ್ಕೆ ಮಾಜಿ ಶಾಸಕರೊರ್ವರಿಗೆ ಬೆದರಿಕೆ ಕರೆ ಬಂದಿದೆ.

ರೇಣುಕಾಸ್ವಾಮಿ ಕೊಲೆ ಖಂಡಿಸಿ, ಚಿತ್ರದುರ್ಗದಲ್ಲಿ ವಿವಿಧ ಸಂಘಟನೆಗಳು ಪ್ರತಿಭಟನೆಯನ್ನು ನಡೆಸಿ ನ್ಯಾಯವನ್ನು ಕೇಳಿದ್ದವು ಇದರಲ್ಲಿ ಈ ಪ್ರತಿಭಟನೆಯಲ್ಲಿ ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿ, ಎಸ್.ಕೆ.ಬಸವರಾಜನ್, ಎಂಎಲ್ಸಿ ಕೆ.ಎಸ್.ನವೀನ್ ಸೇರಿದಂತೆ ರೈತಪರ, ಕನ್ನಡಪರ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು, ನಾಗರೀಕರು ಭಾಗವಹಿಸಿದ್ದರು. ನಟ ದರ್ಶನ್ ವಿರುದ್ಧ ಧಿಕ್ಕಾರ ಕೂಗಿ ಕಠಿಣ ಶಿಕ್ಷೆಗೆ ಆಗ್ರಹಿಸಿದ್ದರು. ಇದರಲ್ಲಿ ಭಾಗವಹಿಸಿದ್ದ ಮಾಜಿ ಶಾಸಕ ಜಿ.ಎಚ್. ತಿಪ್ಪಾರೆಡ್ಡಿ ಕೂಡಾ ದರ್ಶನ್ ವರ್ತನೆ




ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದರು.

ಪ್ರತಿಭಟನೆಯಲ್ಲಿ ಭಾಗವಹಿಸಿ ಭಾಷಣ ಮಾಡಿ, ಮನೆಗೆ ತೆರಳುವ ವೇಳೆ ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಅವರಿಗೆ ಬೆದರಿಕೆ ಕರೆಯೊಂದು ಬಂದಿದೆ. ಅನಾಮಿಕ ವ್ಯಕ್ತಿಯೊಬ್ಬರು ತಿಪ್ಪಾರೆಡ್ಡಿ ಅವರಿಗೆ ಪೋನ್ ಮಾಡಿ, ತಿಪ್ಪಾರೆಡ್ಡಿ ಅಂದ್ರೆ ನೀವೇನಾ ಎಂದು ಗಡುಸಾದ ಧ್ವನಿಯಲ್ಲಿ ಪ್ರಶ್ನಿಸಿದ್ದಾರೆ. ಹೌದು ಹೇಳಿ ಅಂದಾಗ, ಪ್ರತಿಭಟನೆ ಯಾಕೆ ಮಾಡುತ್ತಿದ್ದೀರಾ ಎಂದಿದ್ದಾರೆ.ಅದಕ್ಕೆ ಜಿ.ಎಚ್.ತಿಪ್ಪಾರೆಡ್ಡಿ ಅವರು, ಪ್ರತಿಭಟನೆ ಮಾಡುತ್ತಿರುವ ವಿಚಾರ ಇಡೀ ದೇಶಕ್ಕೆ ಗೊತ್ತಿದೆ. ನೀನ್ಯಾರು ಹೇಳು ಅಂದಿದ್ದಾರೆ. ಆದರೆ, ಕರೆ ಮಾಡಿದ ವ್ಯಕ್ತಿ ಹೆಸರು ಹೇಳಿಲ್ಲ. ಮುಂದುವರೆದು, ನಿಮ್ಮ ಬಳಿ ಏನು ಸಾಕ್ಷಿ ಇದೆ ಎಂದು ಮರು ಪ್ರಶ್ನೆ ಹಾಕಿದ್ದಾನೆ.



ಇನ್ನು ಮಾತು ಮುಂದುವರೆಸುವುದು ಬೇಡ ಎಂದು ತೀರ್ಮಾನಿಸಿದ ಜಿ.ಎಚ್. ತಿಪ್ಪಾರೆಡ್ಡಿ ಕರೆ ಕಟ್ ಮಾಡಿ, ಗನ್‌ಮ್ಯಾನ್‌ಗೆ ಪೋನ್ ಕೊಟ್ಟು ಬ್ಲಾಕ್ ಲಿಸ್ಟ್‌ಗೆ ಹಾಕಿಸಿದ್ದಾರೆ. ಈ ಬಗ್ಗೆ ಇಂದು ಸುದ್ದಿಗಾರರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಮಾಜಿ ಶಾಸಕರು, ಇಷ್ಟೆಲ್ಲಾ ದೊಡ್ಡ ಘಟನೆ ಆದ ನಂತರವೂ ಈ ರೀತಿ ಪೋನ್ ಮಾಡುತ್ತಾರೆಂದರೆ ಹೇಗೆ, ಈ ಬಗ್ಗೆ ನಾನು ಬಹಳ ತಲೆ ಕೆಡಿಸಿಕೊಳ್ಳುವುದಿಲ್ಲ. ಪೊಲೀಸರು ನಂಬರ್ ಕೇಳಿದ್ದಾರೆ. ನಾನೇನು ದೂರು ಕೊಡುವುದಿಲ್ಲ ಎಂದು ತಿಳಿಸಿದರು.

## ಐತಿಹಾಸಿಕ ಸಂತೆ ಹೊಂಡದ ಸ್ವಚ್ಛತಾ ಕಾರ್ಯಕ್ರಮ



» ಚಿತ್ರದುರ್ಗ

ಚಿತ್ರದುರ್ಗ ನಗರಸಭೆ ಹಾಗೂ ಡಾನ್ ಬಾಸ್ಕೋ ಪದವಿಪೂರ್ವ ಕಾಲೇಜು ಸಹಯೋಗದಲ್ಲಿ ಗುರುವಾರ ಚಿತ್ರದುರ್ಗ ನಗರದ ಪ್ರಮುಖ ರಸ್ತೆಗಳಲ್ಲಿ 400ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿಶ್ವ ಪರಿಸರ ದಿನ ಜಾಗೃತಿ ಜಾಥಾ ಹಾಗೂ ಐತಿಹಾಸಿಕ ಸಂತೆ ಹೊಂಡದ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ನಗರಸಭೆ ಪೌರಾಯುಕ್ತರಾದ ಎಂ. ರೇಣುಕಾ ಹಾಗೂ ನಗರಸಭೆಯ ಸಿಬ್ಬಂದಿಗಳು, ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.



## 16ರಂದು ಮೈತ್ರಿ ಕಾರ್ಯಕರ್ತರಿಂದ ನೂತನ ಸಂಸದರಿಗೆ ಅಭಿನಂದನೆ



» ಹೊಸದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಅಭ್ಯರ್ಥಿಯಾಗಿ ಕಣಕ್ಕಿಳಿದು ನೂತನವಾಗಿ ಆಯ್ಕೆಯಾಗಿರುವ ಸಂಸದ ಗೋವಿಂದ ಕಾರಜೋಳ್ ರವರಿಗೆ ಹೊಸದುರ್ಗ ಕಾರ್ಯಕರ್ತರಿಂದ ಅಭಿನಂದನ ಸಮಾರಂಭವನ್ನು ದಿನಾಂಕ 16 ,06,2024 ರ ಭಾನುವಾರ ದಂದು ಬೆಳಿಗ್ಗೆ 11 ಗಂಟೆಗೆ ಶ್ರೀ ಗುರು ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದು ತಾಲೂಕಿನ ಎಲ್ಲಾ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಈ ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ಬಿಜೆಪಿ ಮಂಡಲ ಅಧ್ಯಕ್ಷ ಜಗದೀಶ್ ತಿಳಿಸಿದರು. ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಬಿಜೆಪಿ ಹಾಗೂ ಜೆಡಿಎಸ್ ಮುಖಂಡರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ಪ್ರಧಾನಿ ನರೇಂದ್ರ ಮೋದಿಯವರ ಆಡಳಿತ ಮೆಚ್ಚಿ ಹೊಸದುರ್ಗ ಎರಡು ಪಕ್ಷದ ಕಾರ್ಯಕರ್ತರು ಹಗಲಿರುಳೆನ್ನದೆ ಶ್ರಮಿಸಿ 76252ಮತ ಹಾಕಿ 9687 ಬಹುಮತದೊಂದಿಗೆ ನಮ್ಮ ಕಾರ್ಯಕರ್ತರು ಆಯ್ಕೆ ಮಾಡಿದ್ದಾರೆ.


ಪುಟ 2


## ಪ್ರಮುಖ ಸುದ್ದಿ

# ಭದ್ರಾ, ರೈಲ್ವೆ ಮಾರ್ಗಕ್ಕೆ ಆದ್ಯತೆ: ಸಂಸದ ಕಾರಜೋಳ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ನೀರು ಮತ್ತು ರೈಲು ಮಾರ್ಗ ನಿರ್ಮಾಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದರು.

ನವದೆಹಲಿಯಿಂದ ಚಿತ್ರದುರ್ಗಕ್ಕೆ ಆಗಮಿಸಿದ ಅವರು ಇಂದು ನಗರದ ವಿವಿಧ ಮಠಗಳಿಗೆ ಬೇಟಿ ನೀಡಿ ಶ್ರೀಗಳ ಆರ್ಶಿವಾದವನ್ನು ಪಡೆದು ಸುದ್ದಿಗಾರರೊಂದಿಗೆ ಮಾತನಾಡಿದರು.

ಚಿತ್ರದುರ್ಗ ಜಿಲ್ಲೆ ಬರದ ನಾಡಾಗಿದೆ ಇಲ್ಲಿಗೆ ನೀರಿನ ಅವಶ್ಯಕತೆ ಇದೆ ಈ ಹಿನ್ನಲೆಯಲ್ಲಿ ಅಪ್ಪರ್‌ಭದ್ರಾವನ್ನು ಕೇಂದ್ರ ಸರ್ಕಾರ ರಾಷ್ಟ್ರೀಯ ಯೋಜನೆಯಂದು ಪರಿಗಣಿಸಿದೆ ಹಣವನ್ನು ನೀಡುವುದಾಗಿ ಹೇಳಿತ್ತು ಈ ಹಿನ್ನಲೆಯಲ್ಲಿ ಇದಕ್ಕೆ ಬೇಕಾದ 5300 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿಸುವುದಕ್ಕೆ ನನ್ನ ಮೊದಲ ಆದ್ಯತೆಯನ್ನು ನೀಡಲಾಗುವುದು ಎಂದರು.ಭದ್ರಾ ಯೋಜನೆ ಶೀಘ್ರವಾಗಿ ಪೂರ್ಣಗೊಳ್ಳಲು ಅಗತ್ಯವಾದ ಕ್ರಮವನ್ನು ಸಹಾ ಕೈಗೊಳ್ಳಲಾಗುವುದು. ಚಿತ್ರದುರ್ಗ ಲೋಕಸಬಾ ಕ್ಷೇತ್ರ 3000ಕ್ಕೂ ಹೆಚ್ಚು ಹಳ್ಳಿಗಳನ್ನು ಹೊಂದಿದೆ. ಇಲ್ಲಿ ರೈತಾಪಿ ವರ್ಗ ಕೃಷಿ ಕಾರ್ಮಿಕರ ಸಂಖ್ಯೆ



ಹೆಚ್ಚಾಗಿದೆ. ಈ ಹಿನ್ನಲೆಯಲ್ಲಿ ನೀರಾವರಿಗೆ ಹೆಚ್ಚಿನ ಒತ್ತನ್ನು ನೀಡಲಾಗುವುದೆಂದು ತಿಳಿಸಿದರು. ಬೊಮ್ಮಾಯಿಯವರ ಸರ್ಕಾರ ಇದ್ದಾಗ ಅಪ್ಪರಭದ್ರಾ ಭದ್ರಕ್ಕೆ ನಾನು ನೀರಾವರಿ ಮಂತ್ರಿಯಾಗಿದ್ದಾಗ ಕೇಂದ್ರದಲ್ಲಿ ಪ್ರಯತ್ನ ಮಾಡಿ ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯಾಗಿ ಪರಿಗಣಿಸಲು ಪ್ರಯತ್ನವನ್ನು ಮಾಡಿ 5300 ಕೋಟಿ ರೂ.ಗಳನ್ನು ಆಯವ್ಯಯದಲ್ಲಿ ಇರಿಸಿದ್ದೇವೆ. ಚುನಾವಣೆನಂತರನಮ್ಮಸರ್ಕಾರಬರಲಿಲ್ಲ, ಹಣವನ್ನು ಬಿಡುಗಡೆ ಮಾಡಿಸಲು ರಾಜ್ಯ ಸರ್ಕಾರ ಪ್ರಮಾಣಿಕವಾದ ಪ್ರಯತ್ನವನ್ನು ಮಾಡಲಿಲ್ಲ,ಈ ಹಿನ್ನಲೆಯಲ್ಲಿನನ್ನಮೊದಲ ಆದ್ಯತೆ ಕೇಂದ್ರದಿಂದ 5300 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿಸುವುದು ಆಗಿದೆ. ಇದರಿಂದ ರೈತಾಪಿ ವರ್ಗಕ್ಕೆ ಕೃಷಿ ಭೂಮಿಗೆ ನೀರಾವರಿಯಾಗಲಿದೆ. ಕೃಷಿ ಕಾರ್ಮಿಕರಿಗೂ ಉದ್ಯೋಗ ಸಿಗಲಿದೆ ಎಂದರು.

ಕ್ಷೇತ್ರದ ಅನೇಲ ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ. ರಾಜ್ಯ ಸರ್ಕಾರಕ್ಕೆ ಒತ್ತಾಯ ಮಾಡುತ್ತೇನೆ, ಎಲ್ಲಿ ಸಮಸ್ಯೆಗಳಿವೆ ಎಲ್ಲಿ ಶುದ್ದವಾದ ಕುಡಿಯುವ ನೀರು ಕೊಡಲಿಕ್ಕೆ ಸಾಧ್ಯವಾಗಿಲ್ಲ ಅಂತಹ ಪ್ರದೇಶಗಳನ್ನು ಜಲ ಜೀವನ ಮಿಷನ್ ಅಡಿಯಲ್ಲಿ ತೆಗೆದುಕೊಳ್ಳಲು ನಿಯಾಮಾನುಸಾರ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಲು ರಾಜ್ಯ ಸರ್ಕಾರಕ್ಕೆ ವಿನಂತಿಯನ್ನು ಮಾಡಿದರು.

ರೈಲು ಮಾರ್ಗಗಳು ಆಗಬೇಕೆಂದು ಬಹು ದಿನಗಳ ಬೇಡಿಕೆ ಇದೆ ದಾವಣಗೆರೆ– ಬೆಂಗಳೂರು, ಆಲುಮಟ್ಟಿ, ಕೊಪ್ಪಳ, ಚಿತ್ರದುರ್ಗ ಇವುಗಳನ್ನು ಮಾಡಿಸಲು ಪ್ರಮಾಣಿಕ ಪ್ರಯತ್ನವನ್ನು ಮಾಡಲಾಗುವುದು ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಜಂಟಿಯಾಗಿ ಕೌಶಲ್ಯ ಅಭೀವೃದ್ಧಿ ಕೇಂದ್ರಗಳನ್ನು ಪ್ರಾರಂಭ ಮಾಡಬೇಕಿದೆ, ಇದರಿಂದ ಜನರಿಗೆ ವೃತ್ತಿ ಶಿಕ್ಷಣ, ವೃತ್ತಿ ತರಬೇತಿಯನ್ನು ನೀಡುವ ಕಾರ್ಯವಾಗಬೇಕಿದೆ. ಉದ್ಯೋಗ ಸೃಷ್ಟಿ ಮಾಡುವ ಕಾರ್ಯಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡಬೇಕಿದೆ. ಇದಕ್ಕೆ ಎರಡು ಸರ್ಕಾರಗಳಲ್ಲಿ ಪ್ರಯತ್ನವನ್ನು ಮಾಡಲಾಗುವುದು ಎಂದರು.ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರಳಿ, ಗ್ರಾಮಾಂತರ ಅಧ್ಯಕ್ಷ ಕಲ್ಲೇಶಯ್ಯ, ವಕ್ತಾರರಾದ ನಾಗರಾಜ್ ಬೇದ್ರೆ, ದಗ್ಗೆ ಶಿವಪ್ರಕಾಶ್, ಕಬೀರಾನಂದಾಶ್ರಮದ ಕಾರ್ಯದರ್ಶಿ ವಿ.ಎಲ್. ಪ್ರಶಾಂತ, ಗಣಪತಿ ಶಾಸ್ತ್ರಿ, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಓಂಕಾರ್ ಇದ್ದರು.

## ಫಾಸ್ಟ್ ನ್ಯೂಸ್

### 16ರಂದು ಮೈತ್ರಿ ಕಾರ್ಯಕರ್ತರಿಂದ ನೂತನ ಸಂಸದರಿಗೆ ಅಭಿನಂದನೆ

ಇಂತಹ ನಮ್ಮ ಹೆಮ್ಮೆಯ ಸಂಸದರಿಗೆ ಅಭಿನಂದನೆಯನ್ನು ಸಲ್ಲಿಸಲಾಗುವುದು ಎಂದರು.

ಪೂರ್ವಭಾವಿ ಸಭೆಯಲ್ಲಿ ರಾಜ್ಯ ಖನಿಜ ನಿಗಮ ಮಾಜಿ ಅಧ್ಯಕ್ಷ ಎಸ್ ಲಿಂಗಮೂರ್ತಿ, ಬಿಜೆಪಿ ಮುಖಂಡ ಯುವ ಉದ್ಯಮಿ ಸದ್ಗುರು ಪ್ರದೀಪ್, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಕೆ ಎಸ್ ಕಲ್ಮಠ, ಪುರಸಭಾ ಮಾಜಿ ಅಧ್ಯಕ್ಷ ಶ್ರೀನಿವಾಸ್ ಗೂಳಿಹಟ್ಟಿ ಕೃಷ್ಣಮೂರ್ತಿ ಮಾಜಿ ಜಿ ಪಂ ಸದಸ್ಯ ಗುರುಸ್ವಾಮಿ, ಹೆಬ್ಬಳ್ಳಿ ಮಲ್ಲಿಕಾರ್ಜುನ್, ಶಿವು ಮಠ, ವಕೀಲರ ಸಂಘದ ಅಧ್ಯಕ್ಷ ರವಿಕುಮಾರ್, ಮರಿದಿಮ್ಮಪ್ಪ, ತಂಡದ ಕಲ್ಲೇಶ್ , ಜಾನಕಲ್ ತಿಮ್ಮಪ್ಪ, , ಸದಸ್ಯರಾದ ಸರೋಜಮ್ಮ, ಗೀತಾ ಆಸಂದಿ ,ಪಾರ್ವತಮ್ಮ, ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಬಸವಣ್ಣನ ನಾಡಿನ ಮುತ್ಸದ್ದಿ ರಾಜಕಾರಣಿ ಗೋವಿಂದ ಕಾರಜೋಳ್ ರವರು ಹೊಸದುರ್ಗದ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸಲು ಆಗಮಿಸುತ್ತಿದ್ದು ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎಂಬ ಸಾಮಾಜಿಕ ನ್ಯಾಯದಡಿ ನೂತನ ಸಂಸದರು ತಮ್ಮ ಜವಾಬ್ದಾರಿಯನ್ನು ನಿರ್ವಹಿಸಲಿದ್ದು ಜಾತಿ ವರ್ಗ ವರ್ಣ ರಹಿತ ಸಮ ಸಮಾಜದ ನಿರ್ಮಾಣವೇ ನಮ್ಮ ಗುರಿ ಎಂಬ ಸಿದ್ಧಾಂತವನ್ನು ಮೈಗೂಡಿಸಿಕೊಂಡಿದ್ದಾರೆ.

» **ಜಗದೀಶ್ ರಾಮಯ್ಯ, ಮಂಡಲ ಪ್ರಧಾನ ಕಾರ್ಯದರ್ಶಿ , ಹೊಸದುರ್ಗ.**

### ವ್ಯಕ್ತಿ ಕಾಣೆ ಪತ್ತೆಗೆ ಮನವಿ

» **ಚಿತ್ರದುರ್ಗ**

ತಾಲ್ಲೂಕಿನ ಡಿ.ಮದಕರಿಪುರ ಗ್ರಾಮದ ನಾಗರಾಜ್ ತಂದೆ ಚನ್ನಪ್ಪ (ಸು.49ವರ್ಷ) ವ್ಯಕ್ತಿ ಕಾಣೆಯಾದ ಕುರಿತು ಜೂನ್ 11 ರಂದು ಭರಮಸಾಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಾಗರಾಜ್ ಸು.5.6 ಅಡಿ ಎತ್ತರ, ಸಧೃಢ ದೇಹ ಮತ್ತು ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ ಹೊಂದಿದ್ದು, ಕನ್ನಡ ಮತ್ತು ಲಂಬಾಣಿ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಸಿಮೆಂಟ್ ಕಲರ್ ಶರ್ಟ್ ಮತ್ತು ಬಿಳಿ ಕಲರ್ ಪ್ಯಾಂಟ್ ಧರಿಸಿರುತ್ತಾರೆ. ಕಾಣೆಯಾದ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ, ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08194-258421, ಪೊಲೀಸ್ ನಿರೀಕ್ಷಕರ ದೂರವಾಣಿ ಸಂಖ್ಯೆ 08194-231844, 9480803163, ಚಿತ್ರದುರ್ಗ ಪೊಲೀಸ್ ಕಂಟ್ರೋಲ್ ರೂಂ ಸಂಖ್ಯೆ 08194-222782, 08194-100 ಗೆ ಸಂಪರ್ಕಿಸಲು ತಿಳಿಸಿದೆ.

### ವ್ಯಕ್ತಿಗಳು ಕಾಣೆ

» **ಚಿತ್ರದುರ್ಗ**

ಇಬ್ಬರು ವ್ಯಕ್ತಿಗಳು ಕಾಣೆಯಾಗಿರುವ ಕುರಿತು ನಗರದ ಕೋಟೆ ಪೊಲೀಸ್ ಠಾಣೆಯಲ್ಲಿ ಎರಡು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ನಗರದ ಎಪಿಎಂಸಿ ಹಮಾಲರ ಕ್ವಾಟ್ರಸ್ ನಿವಾಸಿ ಸಿ.ಆಶಾ ಗಂಡ ಜಿ.ಎನ್.ಏಳುಕೋಟಿ (38 ವರ್ಷ) ಮಹಿಳೆ ಕಾಣೆಯಾದ ಕುರಿತು 2024ರ ಮೇ 25 ರಂದು ಪ್ರಕರಣ ದಾಖಲಾಗಿದೆ. ಕಾಣೆಯಾದ ಸಿ.ಆಶಾ ಸು.5 ಅಡಿ ಎತ್ತರ, ಕೆಂಪು ಮೈಬಣ್ಣ, ದುಂಡು ಮುಖ ದಪ್ಪನೆಯ ಮೈಕಟ್ಟು ಹೊಂದಿದ್ದಾರೆ. ಬಲ ಗಣ್ಣಿನ ಬಲ ಭಾಗದಲ್ಲಿ ಕಡಲೇ ಬೇಳೆ ಆಕಾರದ ಉಬ್ಬಿದ ಮಚ್ಚೆ ಇದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಕೆಂಪು ಸೀರೆ ಕೆಂಪು ಬಣ್ಣದ ಬ್ಲೌಸ್ ಧರಿಸಿರುತ್ತಾರೆ. ನಗರದ ನೆಹರೂ ನಗರ 1ನೇ ಕ್ರಾಸ್ ನಿವಾಸಿ ಶ್ರೀನಿವಾಸ್ ತಂದೆ ಪ್ರಕಾಶಪ್ಪ (ಸು.50ವರ್ಷ) ವ್ಯಕ್ತಿ ಕಾಣೆಯಾದ ಕುರಿತು ಜೂನ್ 10 ರಂದು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಶ್ರೀನಿವಾಸ್ ಸು.5.5 ಅಡಿ ಎತ್ತರ, ಕೋಲು ಮುಖ ತೆಳ್ಳನೆಯ ಮೈಕಟ್ಟು, ಗೋಧಿ ಮೈಬಣ್ಣ, ತಲೆಯಲ್ಲಿ ಕಪ್ಪು ಬಣ್ಣದ ದಪ್ಪನೆಯ ಕೂದಲು ಹೊಂದಿದ್ದು, ಕನ್ನಡ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಪಿಂಕ್ ಕಲರ್ ಟೀ ಶರ್ಟ್, ನೀಲಿ ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾರೆ. ಈ ಮೇಲ್ಕಂಡ ವ್ಯಕ್ತಿಗಳ ಕುರಿತು ಮಾಹಿತಿ ತಿಳಿದು ಬಂದಲ್ಲಿ, ಚಿತ್ರದುರ್ಗ ಕೋಟೆ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರ ದೂರವಾಣಿ ಸಂಖ್ಯೆ 08194-222933, 9480803145, ಪೊಲೀಸ್ ಉಪಾಧೀಕ್ಷಕರು ಚಿತ್ರದುರ್ಗ ಉಪವಿಭಾಗ ದೂರವಾಣಿ ಸಂಖ್ಯೆ 08194-222430, 9480803120, ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ ಸಂಖ್ಯೆ 08194-222782 ಗೆ ಸಂಪರ್ಕಿಸಲು ತಿಳಿಸಿದೆ.

### ಗ್ರಾಹಕರ ಸಂವಾದ ಕಾರ್ಯಕ್ರಮ

» **ದಾವಣಗೆರೆ**

ನಗರ ಉಪ ವಿಭಾಗ-1ರ ವತಿಯಿಂದ ಜೂನ್ 15 ರಂದು ಮಧ್ಯಾಹ್ನ 3 ರಿಂದ 5:30 ರವರೆಗೆ ಗ್ರಾಹಕರ ಸಂವಾದ ಕಾರ್ಯಕ್ರಮವನ್ನು ನಗರದ ಬೆ.ವಿ.ಕಂ. ನಗರ ಉಪ ವಿಭಾಗ-1, ಹಮ್ಮಿಕೊಳ್ಳಲಾಗಿದೆ. ನಗರ ಉಪ ವಿಭಾಗ-1ರ ವ್ಯಾಪ್ತಿಗೆ ಬರುವ ಗ್ರಾಹಕರು ತಮ್ಮ ಅಹವಾಲುಗಳೇನಾದರೂ ಇದ್ದಲ್ಲಿ ಮಧ್ಯಾಹ್ನ 3:00 ಗಂಟೆಗೆ ಹಾಜರಾಗಬೇಕೆಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

# ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಇಲಾಖೆ ಜೊತೆಗೆ ಸಾರ್ವಜನಿಕರು ಪ್ರೇರಣೆ ಅತ್ಯಗತ್ಯ: ಡಿಸಿ

» **ದಾವಣಗೆರೆ**

ಸಾಮಾಜಿಕ ಪಿಡುಗಾಗಿ ಪರಿಣಮಿಸಿರುವ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಮಾಡಲು ಕೇವಲ ಸರ್ಕಾರ, ಇಲಾಖೆಗಳ ಜೊತೆಗೆ ಸಾರ್ವಜನಿಕರು ಮತ್ತು ಪೋಷಕರು ಸಹ ಸ್ವಯಂ ಪ್ರೇರಣೆಯಿಂದ ನರ್ಮೂಲನೆಗೆ ಬದ್ದರಾಗಬೇಕೆಂದು ಜಿಲ್ಲಾಧಿಕಾರಿ ಹಾಗೂ ಬಾಲ ಕಾರ್ಮಿಕ ಪದ್ದತಿ ನಿರ್ಮೂಲನಾ ಯೋಜನಾ ಸೊಸೈಟಿ ಅಧ್ಯಕ್ಷರಾದ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು



ಬುಧುವಾರ (12) ನಗರದ ಎಸ್.ಪಿ.ಎಸ್ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ,ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ, ವಕೀಲರ ಸಂಘ ಹಾಗೂ ಸ್ವಯಂ ಸೇವಾ ಸಂಸ್ಥೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬಾಲಕಾರ್ಮಿಕತೆ ಮಕ್ಕಳ ಬಾಲ್ಯ ಅವರ ಸಾಮರ್ಥ್ಯ, ಘನತೆಯನ್ನು ಕಸಿದುಕೊಳ್ಳುವ ಮತ್ತು ಮಗುವಿನ ದೈಹಿಕ ಮತ್ತು ಮಾನಸಿಕ ಬೆಳವಣಿಗೆ ಸಾಮಾಜಿಕವಾಗಿ ಅಥವಾ ನೈತಿಕವಾಗಿ ಹಾನಿಕಾರಕವಾಗಿದೆ. ಆದ್ದರಿಂದ ಮಕ್ಕಳು ಬಾಲ್ಯದಲ್ಲಿಯೇ ಶಾಲೆಗೆ ಬಂದು ಉತ್ತಮ ಶಿಕ್ಷಣ ಪಡೆದು ಭವಿಷ್ಯ ರೂಪಿಸಿಕೊಳ್ಳಬೇಕು.

ಆದರೆ ವಿವಿಧ ಕಾರಣಗಳಿಗಾಗಿ ಪಾಲಕರು ಅವರನ್ನು ಶಾಲೆ ಬಿಡಿಸಿ ಚಿಕ್ಕ ವಯಸ್ಸಿನಲ್ಲಿ ಯಾವುದಾದರೂ ದುಡಿಮೆಗೆ ಸೇರಿಸುತ್ತಾರೆ, ಇದು ತಪ್ಪಬೇಕಿದೆ.

ಸಂವಿಧಾನ 14 ವರ್ಷದೊಳಗಿನ ಮಕ್ಕಳಿಗೆ ಕಡ್ಡಾಯ ಶಿಕ್ಷಣ ಹಕ್ಕು ನೀಡಿದೆ, ಆದ್ದರಿಂದ ಎಲ್ಲಿಯಾದರೂ ಮಕ್ಕಳು ಕೆಲಸ ಮಾಡುವುದು ಕಂಡು ಬಂದರೆ ಅವರನ್ನು ಕೆಲಸದಿಂದ ಬಿಡಿಸಿ ಶಾಲೆಗೆ ಕಳಿಸಬೇಕು. ಇದನ್ನು ಸರ್ಕಾರಿ ಇಲಾಖೆ ಅಧಿಕಾರಿಗಳು ಮಾತ್ರವೇ ಮಾಡಬೇಕೆಂದು ಜನತೆ ಸುಮ್ಮನಿರಬಾರದು, ಸಾರ್ವಜನಿಕರು ಸಹ ಅಭಿವೃದ್ಧಿಗೆ ಮುಂದಾಗಿ 18 ವರ್ಷದೊಳಗಿನ ಮಕ್ಕಳ ಶೋಷಣೆ ದೌರ್ಜನ್ಯ, ದಬ್ಬಾಳಿಕೆ, ಲೈಂಗಿಕ ಕಿರುಕುಳ ಅವರ ಅಭಿಪ್ರಾಯ ಮತ್ತು ಸ್ವಾತಂತ್ರ್ಯಕ್ಕೆ ಒತ್ತಡ ಇರುವುದು ಬಲತ್ಕಾರ ಮತ್ತು ಇಚ್ಛಾಶಕ್ತಿ ವಿರುದ್ಧ ಒತ್ತಡ ನಿಷೇಧಿಸಿ 18 ವರ್ಷದ ತನಕ ಮಕ್ಕಳನ್ನು ಮಕ್ಕಳು ಎಂದು ಪರಿಗಣಿಸಿ ಅವರಿಗೆ ಪ್ರೀತಿ, ವಾತ್ಸಲ್ಯ, ಬಾಲ್ಯ,ಶಿಕ್ಷಣ ಮತ್ತು ರಕ್ಷಣೆ ನೀಡಿ ಮಕ್ಕಳ ಕಾನೂನುಗಳನ್ನು ಗೌರವಿಸಿ ಅವರ ಸಮಗ್ರ ಅಭಿವೃದ್ಧಿಗೆ ಮುಂದಾಗಬೇಕಿದೆ ಎಂದು ತಿಳಿಸಿದರು.

ಪಾಲಕರು ಮಕ್ಕಳನ್ನು ದುಡಿಮೆಗೆ ಕಳುಹಿಸಿದೆ ಶಿಕ್ಷಣದ ಮೂಲಕ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಪ್ರಯತ್ನಿಸಬೇಕು. ಮತ್ತು ಅವರಿಗೆ ಶಿಕ್ಷಣ ಕೊಡಿಸಿ ಸಮಾಜದಲ್ಲಿ ತಮ್ಮ ಮಕ್ಕಳು ಸಹ ಮುಂದೆ ಬರುವಂತೆ ಮಾಡಬೇಕು ಎಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಾವೀರ್ ಮಾ.ಕೆರೆಣ್ಣನವರು ಉದ್ಘಾಟಿಸಿ ಮಾತನಾಡಿ ಬಾಲಕಾರ್ಮಿಕ ಪದ್ಧತಿ ತಡೆಯಲು ವಿಶ್ವದೆಲ್ಲೆಡೆ ಕಾರ್ಯಕ್ರಮವನ್ನು ಆಚರಿಸಲಾಗುತ್ತಿದೆ. ಸ್ವಾರ್ಥ, ದುರಾಸೆ ಹಾಗೂ ದುರುದ್ದೇಶದಿಂದ ಮಕ್ಕಳನ್ನು ಬಾಲಕಾರ್ಮಿಕ ಪದ್ದತಿಗೆ ದೂಡಲಾಗುತ್ತಿದೆ, ಇದು ಅಪರಾಧ ಎಂದರು.

ಬಾಲಕಾರ್ಮಿಕ ಪದ್ಧತಿ ನಿಯಂತ್ರಣಕ್ಕಾಗಿ ಕೇಂದ್ರ ಸರ್ಕಾರ 1986ರಲ್ಲಿ ಕಾಯ್ದೆ ಜಾರಿಗೊಳಿಸಿದೆ. ಕಾರ್ಖಾನೆ ಹಾಗೂ ಸ್ಫೋಟಕ ವಸ್ತುಗಳ ತಯಾರಿಕಾ ಉದ್ದಿಮೆಗಳಲ್ಲಿ ಮಕ್ಕಳನ್ನು ತೊಡಗಿಸಿಕೊಳ್ಳುವುದು ಕಾನೂನು ಅಪರಾಧವಾಗಿದೆ. ಆದ್ದರಿಂದ ಸ್ವತಂತ್ರವಾಗಿ ಜೀವಿಸುವ ಹಕ್ಕನ್ನು ಮಕ್ಕಳಿಂದ ಬಲವಂತವಾಗಿ ಕಿತ್ತುಕೊಳ್ಳದೆ, ಅವರಿಗೆ ಉತ್ತಮ ಶಿಕ್ಷಣ ಹಾಗೂ ಆರೋಗ್ಯ ಒದಗಿಸಬೇಕು. ಅವರಿಗೆ ಪುನರ್ವಸತಿ ಕಲ್ಪಿಸಿ ಕಡ್ಡಾಯ ಶಿಕ್ಷಣ ನೀಡಬೇಕು ಎಂದು ಅವರು ತಿಳಿಸಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಜಿ.ಇಬ್ರಾಹಿಂ ಸಾಬ್ ಸ್ವಾಗತಿಸಿದರು, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಕೊಟ್ರೇಶ್ ಜಿ. ಬಾಲ ಕಾರ್ಮಿಕ ಪದ್ದತಿ ವಿರೋಧಿ ಪ್ರತಿಜ್ಞೆ ಭೋದಿಸಿದರು.

ಕಾರ್ಯಕ್ರದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ವಾಸಂತಿ ಉಪ್ಪಾರ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ನಾಗರಾಜ್ ಕೆ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ರಾಮನಾಯ್ಕ, ಸಹಾಯಕ ಕಾರ್ಮಿಕ ಆಯುಕ್ತರಾದ ವೀಣಾ ಎಸ್.ಆರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತಾ, ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್. ಅರುಣಕುಮಾರ್, ಮಂಡಕ್ಕಿ ಭಟ್ಟಿ ಮಾಲೀಕರ ಸಂಘದ ಅಧ್ಯಕ್ಷರು ಅಕ್ಬರ್ ಆಲಿ, ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕ ಈ.ಎನ್. ಪ್ರಸನ್ನಕುಮಾರ ಹಾಗೂ ಇನ್ನಿತರರು ಭಾಗವಹಿಸಿದ್ದರು.

ಕಾರ್ಯಕ್ರಮದ ಮೊದಲು ಬಾಲ ಕಾರ್ಮಿಕ ಪದ್ದತಿ ವಿರೋಧಿಸಿ ಶಾಲಾ ಮಕ್ಕಳಿಂದ ಜಾಥಾ ನೆಡೆಯಿತು.

# ಐತಿಹಾಸಿಕ ಸಂತೆ ಹೊಂಡದ ಸ್ವಚ್ಛತಾ ಕಾರ್ಯಕ್ರಮ


» **ಚಿತ್ರದುರ್ಗ**

ಚಿತ್ರದುರ್ಗ ನಗರಸಭೆ ಹಾಗೂ ಡಾನ್ ಬಾಸ್ಕೋ ಪದವಿಪೂರ್ವ ಕಾಲೇಜು ಸಹಯೋಗದಲ್ಲಿ ಗುರುವಾರ ಚಿತ್ರದುರ್ಗ ನಗರದ ಪ್ರಮುಖ ರಸ್ತೆಗಳಲ್ಲಿ 400ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿಶ್ವ ಪರಿಸರ ದಿನ ಜಾಗೃತಿ ಜಾಥಾ ಹಾಗೂ ಐತಿಹಾಸಿಕ ಸಂತೆ ಹೊಂಡದ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ನಗರಸಭೆ ಪೌರಾಯುಕ್ತರಾದ ಎಂ. ರೇಣುಕಾ ಹಾಗೂ ನಗರಸಭೆಯ ಸಿಬ್ಬಂದಿಗಳು, ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.





ಗುಲ್ಬರ್ಗಾ ಲೋಕಸಭಾ ಕ್ಷೇತ್ರದ ನೂತನ ಸದಸ್ಯ ರಾಧಕೃಷ್ಣ ಎಸ್. ದೊಡ್ಡಮನಿಯವರನ್ನು ಬೆಂಗಳೂರಿನ ಅವರ ನಿವಾಸದಲ್ಲಿ ಭೇಟಿ ಮಾಡಿದ ಕೆಪಿಸಿಸಿಯ ಪ್ರಧಾನ ಕಾರ್ಯದರ್ಶಿ ರಾಮಪ್ಪ ನೇರ್ಲಗುಂಟೆ ಹಾಗೂ ಕಾಡಾ ಅಧ್ಯಕ್ಷ ಮರಿಸ್ವಾಮಿ ಶುಭ ಕೋರಿದರು.

## ಇಂದಿನಿಂದ ಎಸ್ಎಸ್ಎಲ್ಸಿ ಫೇಲಾದ ವಿದ್ಯಾರ್ಥಿಗಳಿಗೆ ಮರುಪರೀಕ್ಷೆ ಆರಂಭ

» **ಚಳ್ಳಕೆರೆ**

ಕಳೆದ ಏಪ್ರೀಲ್ ತಿಂಗಳಲ್ಲಿ ನಡೆದ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಸುಮಾರು 1383 ವಿದ್ಯಾರ್ಥಿಗಳಿಗೆ ಮರು ಪರೀಕ್ಷೆಯನ್ನು ಜೂನ್14ರಿಂದ22ವರೆಗೆ ನಡೆಯಲಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ಚಳ್ಳಕೆರೆ ನಗರದ ಐದು ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ, ಬಿಎಂ ಸರ್ಕಾರಿ ಪ್ರೌಢಶಾಲೆ, ಎಚ್‌ಟಿಟಿ ಬಾಲಕಿಯರ ಪ್ರೌಢಶಾಲೆ, ಆದರ್ಶ, ಮೊರಾರ್ಜಿ ಮತ್ತು ಬಾಪೂಜಿ ಪ್ರೌಢಶಾಲೆಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು, ಈಗಾಗಲೇ ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಲು ಎಲ್ಲಾ ಪೂರ್ವಸಿದ್ದತೆ ಕೈಗೊಳ್ಳಲಾಗಿದೆ ಎಂದಿದ್ದಾರೆ.

## ತಂಬಾಕು ಉತ್ಪನ್ನ ಮಾರಾಟಗಾರರ ಅಂಗಡಿಗಳಿಗೆ ದಾಳಿ: 11 ಪ್ರಕರಣ ದಾಖಲು

» **ಚಿತ್ರದುರ್ಗ**

ಚಿತ್ರದುರ್ಗ ನಗರದ ತುರುವನೂರು ರಸ್ತೆ ಹಾಗೂ ಸೇಂಟ್ ಜೋಸೆಫ್ ಶಾಲೆಯ ಸುತ್ತ-ಮುತ್ತ ಪ್ರದೇಶಗಳಲ್ಲಿ ಜಿಲ್ಲಾ, ತಾಲ್ಲೂಕು ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಗುರುವಾರ ಭೇಟಿ ನೀಡಿ, ದಾಳಿ ನಡೆಸಿ ದಂಡ ವಿಧಿಸಿದೆ.

ಸಾರ್ವಜನಿಕರಲ್ಲಿ ಮತ್ತು ಅಂಗಡಿ ಮಾಲೀಕರಿಗೆ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್



ಮಸಾಲ, ತಂಬಾಕು ಜಗಿದು ಉಗಿಯದಂತೆ ಎಚ್ಚರಿಸಿ ಜಾಗೃತಿ ಮೂಡಿಸಲಾಯಿತು. ಸಂಬಂಧಪಟ್ಟ ಸೆಕ್ಷನ್-4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು.

ಸೆಕ್ಷನ್-4 ಅಡಿಯಲ್ಲಿ 02 ಪ್ರಕರಣ ದಾಖಲಿಸಿ ರೂ. 200 ದಂಡವನ್ನು, ಸೆಕ್ಷನ್-6ಎ ಅಡಿಯಲ್ಲಿ 02 ಪ್ರಕರಣ ದಾಖಲಿಸಿ ರೂ.200 ದಂಡವನ್ನು ಮತ್ತು ಸೆಕ್ಷನ್-6ಬಿ ಅಡಿಯಲ್ಲಿ 07 ಪ್ರಕರಣದ ದಾಖಲಿಸಿ ರೂ. 1200 ದಂಡವನ್ನು ವಸೂಲಿ ಮಾಡಲಾಯಿತು.

**ಪ್ರಮುಖ ಸುದ್ದಿ**


# 16ರಂದು ಕಂಡುಂಡ ಕತೆಗಳು, ಮೂಕ ಲಹರಿ ಲೋಕಾರ್ಪಣೆ

» **ಚಿತ್ರದುರ್ಗ**

ನಗರದ ತರಾಸು ರಂಗಮಂದಿರದಲ್ಲಿ ಜೂ. 16ರಂದು ಬೆಳಗ್ಗೆ 11 ಗಂಟೆಗೆ ಚೊಚ್ಚಲ ಕೃತಿಗಳಾದ ಕಂಡುಂಡ ಕತೆಗಳು ಮತ್ತು ಮೂಕ ಲಹರಿ ಲೋಕಾರ್ಪಣೆಗೊಳ್ಳಲಿವೆ ಎಂದು ಲೇಖಕ ಡಾ.ದೊಡ್ಡಮಲ್ಲಯ್ಯ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇವೆರಡೂ ಕೃತಿಗಳು ನನ್ನ ಸಾಹಿತ್ಯ ಕೃಷಿಯ ಮೊದಲ ಕೃತಿಗಳು: ಕಂಡುಂಡ ಕಥೆಗಳು ನನ್ನ ಬಾಲ್ಯದ ಮತ್ತು ನಂತರದ ನನ್ನ ಪರಿಸರದ ಅನುಭವಗಳನ್ನು ಸೃಜನಶೀಲ ಚೌಕಟ್ಟಿನಲ್ಲಿ ಕಥೆಗಳನ್ನಾಗಿಸಿ ಕೃತಿಯನ್ನು ರಚಿಸಿದ್ದೇನೆ. ಒಟ್ಟು ಹದಿನೆಂಟು ಕಥೆಗಳಿರುವ ಈ ಕೃತಿಯಲ್ಲಿ ವಿಭಿನ್ನ ರೀತಿಯ ಅಥವಾ ವಸ್ತು ವಿಶೇಷತೆ ಇರುವ ವಿಷಯಗಳನ್ನು ಆರಿಸಿಕೊಂಡಿದ್ದೇನೆ ಎಂದರು.

ಮಾನವ ಪ್ರಕೃತಿಯ ಒಂದು ಭಾಗವಾಗಿ ಪರಿಸರದ ಸ್ವಾಸ್ಥ್ಯಕ್ಕಾಗಿ ಅವನ ವರ್ತನೆಗಳು ಹೇಗಿರಬೇಕು ಎನ್ನುವುದನ್ನು ಪ್ರತಿಪಾದಿಸಿದ ಅನೇಕ ಚಿತ್ರಣಗಳು ಇಲ್ಲಿವೆ. ಹಾಗೆ ಮಾನವೀಯ ನೆಲೆಯಲ್ಲಿ ತಾನು ವಹಿಸಬೇಕಾದ ಜವಾಬ್ದಾರಿಗಳ ಅರಿವಿದೆ. ಮಾನವ ಮತ್ತು ಪ್ರಾಣಿಗಳ ನಡುವಿನ ಬಾಂಧವ್ಯದ ಅಂದರೆ ಭೂತ ದಯೆಯ ಚಿತ್ರಗಳು ಇವೆ ಎಂದು ತಿಳಿಸಿದರು.



ಇಲ್ಲಿನ ಬಹುತೇಕ ಕಥೆಗಳಲ್ಲಿ ಕೃಷಿ ಮತ್ತು ಪ್ರಾಣಿಗಳ ಸಂಗತಿಗಳು ವಸ್ತು ವಿಷಯಗಳಾಗಿವೆ. ಹಾಗೆ ಪರಿಸರದ ಕಾಣೆ ಇಲ್ಲಿನ ಅಮೂರ್ತ ದೃಷ್ಟಿಕೋನ. ಮಾನವ ಅಥವಾ ಸೃಷ್ಟಿಯ ಸಮಸ್ತವೂ ಪರಿಸರವಾದದ ಪರಿಧಿಯಲ್ಲೇ ಚಲಿಸಿದರೂ ಅನೇಕ ಸಾರಿ ಪರಿಸರವನ್ನು ಮರೆತು ಅಥವಾ ವಿರೋಧಿಸಿ ಹೆಜ್ಜೆ ಹಾಕುವುದರ ಬಗ್ಗೆ ಇಲ್ಲಿ ಎಚ್ಚರವಿದೆ. ಹಾಗೆ ಸಮಾಜದಲ್ಲಿ ಪರಿಸರ ಸಿದ್ಧಾಂತಕ್ಕೆ ವಿರೋಧವಾದ ಕತೆಗಳಲ್ಲಿ ಹಾಗೆ ದಿಕ್ಕರಿಸಿದ ಮನೋಭಾವವನ್ನು ಲೇವಡಿ ಮಾಡುವ ಆಗಿದೆ ಎಂದರು.

ಇನ್ನೊಂದು ಕೃತಿ ಮೂಕಲಹರಿಯಲ್ಲಿ ನನ್ನ ಪಶುವೈದ್ಯಕೀಯ ವೃತ್ತಿಯಲ್ಲಿನ ವಿಶೇಷ




ಘಟನೆಗಳನ್ನು ದಾಖಲಿಸಿದ್ದೇನೆ. ಸರ್ಕಾರಿ ನೌಕರನ ಪಾತ್ರ ಅವನ ನಡವಳಿಕೆ, ಅವನ ಜವಾಬ್ದಾರಿಗಳ, ಸರ್ಕಾರಿ ಅಧಿಕಾರಿಗಳ ಮತ್ತು ಸಮಾಜ ಬಾಂಧವರ ಸಂಬಂಧಗಳ, ಮಾನವೀಯತೆಯ ಪ್ರತಿಪಾದನೆ, ಭೂತದಯೆಯ ಪ್ರತಿಪಾದನೆಗಳು ಪ್ರಧಾನವಾಗಿ ದಾಖಲಾಗಿವೆ. ಪ್ರಾಣಿಗಳ ಸರ್ವತೋಮುಖ ಕಲ್ಯಾಣಕ್ಕೆ ತನ್ಮೂಲಕ ಮಾನ್ನವರ ಉಪಯೋಗಕ್ಕೆ ಪ್ರಾಣಿ ಪ್ರಪಂಚದ ಅಗತ್ಯವನ್ನು ಅನನ್ಯವಾಗಿ ಪ್ರತಿಪಾದಿಸಿದ ಚಿತ್ರಣಗಳು ಇಲ್ಲಿವೆ. ಮನುಷ್ಯರಿಗೆ ಅವುಗಳ ಬಳಕೆ ಮತ್ತು ಪರಿಸರ ಕ್ಷೇತ್ರದಲ್ಲಿ ಪರಸ್ಪರ ಸಂಬಂಧಗಳ ಒಳನೋಟವಿದೆ. ಹಾಗೆಯೇ ಮನುಷ್ಯ ಮತ್ತು ಪ್ರಾಣಿಗಳ ಸಂಬಂಧದ ಸೃಷ್ಟಿಯ ವಿವಿಧ ಆಯಾಮಗಳನ್ನು ಪರಿಶೋಧಿಸುವ ಸಂಗತಿಗಳು ಇಲ್ಲಿವೆ ಎಂದು ಹೇಳಿದರು.

ಸಂಸ್ಕೃತಿ ಚಿಂತಕ ಕಾಳೇಗೌಡ ನಾಗವಾರರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕೃತಿ ಲೋಕಾರ್ಪಣೆ ಗೊಳಿಸಲಿದ್ದಾರೆ. ಸಾಹಿತಿ ಸಿ.ಸೋಮಶೇಖರಯ್ಯ ವಹಿಸಲಿದ್ದಾರೆ. ಕಂಡುಂಡ ಕಥೆಗಳು ಕೃತಿಯನ್ನು ಕುರಿತು ಜಿಲ್ಲೆಯ ಖ್ಯಾತ ಸಾಹಿತಿಗಳಾದ ಪ್ರೊ.ಬಿ.ಪಿ.ವೀರೇಂದ್ರ ಕುಮಾರ್ ಮತ್ತು ಮೂಕಲಹರಿ ಕೃತಿಯನ್ನು ಕುರಿತು ಸಾಹಿತಿಗಳೂ ಹಾಗೂ ಹೋರಾಟಗಾರರಾದ ಬೆಂಗಳೂರಿನ ಮಂಜುನಾಥ್ ಎಂ.ಅದ್ದೆಯವರು ಮಾತನಾಡಲಿದ್ದಾರೆ. ಕರ್ನಾಟಕ ಪಶುವೈದ್ಯಕೀಯ ಸಂಘದ ರಾಜ್ಯಾಧ್ಯಕ್ಷ ಡಾ.ಶಿವಶರಣಪ್ಪ ಯಲಗೋಡು, ಕನ್ನಡ ಪಶುವೈದ್ಯ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ.ಎಸ್.ಬಿ.ರವಿಕುಮಾರ್, ಕರ್ನಾಟಕ ಪಶುವೈದ್ಯಕೀಯ ಸಂಘದ ಚಿತ್ರದುರ್ಗ ಜಿಲ್ಲಾಧ್ಯಕ್ಷರಾದ ಡಾ.ಎಸ್.ಕಲ್ಲಪ್ಪನವರು ಹಾಗೂ ಬೆಂಗಳೂರಿನ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಸಮಾಜಶಾಸ್ತ್ರದ ಪ್ರಾಧ್ಯಾಪಕರಾದ ಸಿ.ಜಿ.ಲಕ್ಷ್ಮೀಪತಿಯವರು ಭಾಗವಹಿ ಸಲಿದ್ದಾರೆ. ಇದೇ ಸಂದರ್ಭದಲ್ಲಿ ಸಾಹಿತಿಗಳಾದ ಪ್ರೊ:ಲಿಂಗಪ್ಪ ಎಚ್., ಶ್ರೀಮತಿ ಶೈಲಾಜಯಕುಮಾರ್ ಹಾಗೂ ಬೆಳಗಟ್ಟ ನಾಗರಾಜರನ್ನು ಸನ್ಮಾನಿಸಲಾಗುತ್ತಿದೆ ಎಂದರು.

ಗೋಷ್ಠಿಯಲ್ಲಿ ದಾಸೇಗೌಡ, ಗೋವಿಂದರಾಜು, ಯೂಸೆಫ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ಪರಿಶಿಷ್ಟ ವರ್ಗದ ಕಾನೂನು ಪದವೀಧರರಿಂದ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024-25ನೇ ಸಾಲಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಡಳಿತ ನ್ಯಾಯಾಧೀಕರಣದಲ್ಲಿ ತರಬೇತಿ ನೀಡಲು ಪರಿಶಿಷ್ಟ ವರ್ಗದ ಕಾನೂನು ಪದವೀಧರರನ್ನು ಆಯ್ಕೆಮಾಡಬೇಕಾಗಿರುವುದರಿಂದ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜೂನ್ 18 ರಿಂದ ಜುಲೈ 31 ರವರೆಗೆ ವೆಬ್‌ಸೈಟ್ ಣತಿ.ಇಚಿಡಿ.ಟುಭಿ.ಏಟ ನಲ್ಲಿ ಅರ್ಜಿ ಸಲ್ಲಿಸಿ, ಸಲ್ಲಿಸಿರುವ ಅರ್ಜಿಗಳನ್ನು ಚಿತ್ರದುರ್ಗ ಜಿಲ್ಲಾ ಪರಿಶಿಷ್ಟ ವರ್ಗಗಳ ಕಚೇರಿಗೆ ಜುಲೈ 31ರ ಸಂಜೆ 5.30ರೊಳಗೆ ಸಲ್ಲಿಸಬೇಕು.
ಷರತ್ತುಗಳು: ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪರಿಶಿಷ್ಟ ವರ್ಗಕ್ಕೆ ಸೇರಿರಬೇಕು. ಅರ್ಜಿ ಸಲ್ಲಿಸಲು ನಿಗಧಿಪಡಿಸಿದದಿನಾಂಕಕ್ಕೆಕಾನೂನುಪದವಿಯನ್ನು ಪಡೆದು 02 ವರ್ಷ ಮೀರಿರಬಾರದು. ಬಾರ್ ಕೌನ್ಸಿಲಿಂಗ್‌ನ ಖಾಯಂ ಸದಸ್ಯತ್ವ ಪ್ರಮಾಣ ಪತ್ರ ಸಲ್ಲಿಸಬೇಕು ಹಾಗೂ ತರಬೇತಿಯನ್ನು ಜಿಲ್ಲೆಯಲ್ಲಿಯೇ ಪಡೆಯಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಅಭ್ಯರ್ಥಿಯ ವಯಸ್ಸು 40 ವರ್ಷ ಮೀರಿರಬಾರದು. ಆಯ್ಕೆ ಮಾಡಲಾದ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ಸರ್ಕಾರದ ಆದೇಶದಂತೆ ಶಿಷ್ಯ ವೇತನವನ್ನು ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್, ಸರ್ಕಾರಿ ವಕೀಲರು ಅಥವಾ 20 ವರ್ಷಗಳ ಕಾಲ ಕಡಿಮೆ ಇಲ್ಲದ ವಕೀಲ ವೃತ್ತಿಯಲ್ಲಿ ಸೇವೆ ಸಲ್ಲಿಸಿರುವ ನ್ಯಾಯವಾದಿಗಳ ಬಳಿ ತರಬೇತಿ ಪಡೆಯುತ್ತೀರಿ ಎಂಬ ಬಗ್ಗೆ ಲಿಖಿತ ರೂಪದಲ್ಲಿ ತಿಳಿಸಿರಬೇಕು. ತರಬೇತಿಯ ಅವಧಿ 02 ವರ್ಷವಿದ್ದು, ಆಯ್ಕೆಯಾದ ಅಭ್ಯರ್ಥಿಗಳು ಮಧ್ಯದಲ್ಲಿ ಬಿಡುವುದಿಲ್ಲ ಎಂದು, ಒಂದು ವೇಳೆ ಬಿಟ್ಟರೆ ತರಬೇತಿ ಅವಧಿಯಲ್ಲಿ ಪಡೆದಿರುವ ಶಿಷ್ಯ ವೇತನವನ್ನು ಶೇ.10ರಷ್ಟು ರೂಗಳ ಬಡ್ಡಿಯೊಂದಿಗೆ ಸರ್ಕಾರಕ್ಕೆ ಹಿಂತಿರುಗಿಸಿ ಮರುಪಾವತಿ ಮಾಡುವುದಾಗಿ ಮುಚ್ಚಳಿಕೆ ಬರೆದು ಕೊಡಬೇಕು. ಈ ನಿಯಮ ರಾಜ್ಯ ಮತ್ತು ಕೇಂದ್ರ ಸರ್ಕಾರದಲ್ಲಿ ನೌಕರಿ ಪಡೆದರೆ ಅನ್ವಯಿಸುವುದಿಲ್ಲ. ಆಯ್ಕೆಯಾದ ಅಭ್ಯರ್ಥಿಗಳು ಸುಳ್ಳು ಮಾಹಿತಿ ಹಾಗೂ ಸುಳ್ಳು ದಾಖಲೆಗಳನ್ನು ನೀಡಿ ಆಯ್ಕೆಯಾಗಿ ಶಿಷ್ಯ ವೇತನ ಪಡೆದರೆ ಅಂತಹ ಅಭ್ಯರ್ಥಿಗಳು ತರಬೇತಿ ಅವಧಿಯಲ್ಲಿ ಪಡೆದ ಶಿಷ್ಯ ವೇತನವನ್ನು ಒಟ್ಟಿಗೆ ಶೇ.10%ರೂಗಳ ಬಡ್ಡಿಯಲ್ಲಿ ಸರ್ಕಾರಕ್ಕೆ ಹಿಂತಿರುಗಿಸಿ ಕಟ್ಟಬೇಕು ತಪ್ಪಿದರೆ ಭೂ ಕಂದಾಯ ಬಾಕಿ ವಸೂಲಿಯಂತೆ ವಸೂಲಿ ಮಾಡಲಾಗುತ್ತದೆ. ಆಯ್ಕೆಯಾದ ಅಭ್ಯರ್ಥಿಗಳು ನಿಗಧಿತ ದಿನಾಂಕದೊಳಗೆ ಹಾಜರಾಗದಿದ್ದರೆ ಅಂತಹವರ ಆಯ್ಕೆಯನ್ನು ರದ್ದು ಪಡಿಸಲಾಗುವುದು. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪರಿಶಿಷ್ಟ ವರ್ಗಕ್ಕೆ ಸೇರಿರಬೇಕು. ಪರಿಶಿಷ್ಠ ವರ್ಗದ ಕಾನೂನು ಪದವಿಧರರ ವಾರ್ಷಿಕ ವರಮಾನದ ಮೊತ್ತ 2,50,000/– ಒಳಗಡೆ ಇರಬೇಕು. ಅರ್ಜಿಯೊಂದಿಗೆ ಸಲ್ಲಿಸುವ ಎಲ್ಲಾ ದಾಖಲಾತಿಗಳನ್ನು ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿರಬೇಕು, ತಪ್ಪಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಎಂದು ಜಿಲ್ಲಾ ಪರಿಶಿಷ್ಠವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

## ದೀನ ದಯಾಳ್ ಅಂತ್ಯೋದಯ ಯೋಜನೆ-ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ

» **ದಾವಣಗೆರೆ**

ದೀನ ದಯಾಳ್ ಅಂತ್ಯೋದಯ ಯೋಜನೆ–ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ ಯೋಜನೆಯಡಿ ಪ್ರಸಕ್ತ ಸಾಲಿಗೆ ಸ್ವಯಂ ಉದ್ಯೋಗ ವ್ಯಕ್ತಿಗತ ಉದ್ಯಮಶೀಲತೆ (ಸಾಲ ಮತ್ತು ಸಹಾಯಧನ), ಗುಂಪು ಉದ್ಯಮ ಕಾರ್ಯಕ್ರಮದಡಿ, ಗುಂಪು ಉದ್ಯಮ ಕೈಗೊಳ್ಳಲು, ಎಸ್.ಹೆಚ್.ಜಿ ಬ್ಯಾಂಕ್ ಕ್ರೆಡಿಟ್ ಲಿಂಕೇಜ್ ಕಾರ್ಯಕ್ರಮದಡಿ ಸಾಲ ಪಡೆಯಲು, ಕೌಶಲ್ಯಾಭಿವೃದ್ಧಿ ಮೂಲಕ ಉದ್ಯೋಗ ಮತ್ತು ಸ್ಥಳ ನಿಯುಕ್ತಿ ಕಾರ್ಯಕ್ರಮದಡಿ ವಿವಿಧ ತರಬೇತಿಯನ್ನು ಪಡೆಯಲು, ಮಹಿಳಾ ಸ್ವ ಸಹಾಯ ಸಂಘಗಳನ್ನು ರಚಿಸಲು, ವಿಕಲಚೇತನ ಪುರುಷರ ಸ್ವ ಸಹಾಯ ಸಂಘಗಳನ್ನು ರಚಿಸಲು, ಬೀದಿಬದಿವ್ಯಾಪಾರಿಗಳಸ್ವಸಹಾಯಸಂಘಗಳನ್ನು ರಚಿಸಲು ಆಸಕ್ತ ಅರ್ಹ ಫಲಾನುಭವಿ, ಗುಂಪುಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಜುಲೈ 11 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಅರ್ಜಿಗಳನ್ನು ಸಲ್ಲಿಸುವ ಫಲಾನುಭವಿಗಳು ಮಲೆಬೆನ್ನೂರು ಪಟ್ಟಣ ನಿವಾಸಿಗಳಾಗಿರಬೇಕು, ಬಡತನ ರೇಖೆ ಕೆಳಗಿನ ಕುಟುಂಬದವರಾಗಿರಬೇಕು. ಹಾಗೂ ಅರ್ಜಿಯೊಂದಿಗೆ ರೇಷನ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ನಿವಾಸಿ ದೃಢೀಕರಣ ಪತ್ರ, ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಅನುಭವ ಪ್ರಮಾಣ ಪತ್ರ, ಹುಟ್ಟಿದ ತಾರೀಖು ದೃಢೀಕರಣ ಪತ್ರ ಲಗತ್ತಿಸಿ. ಅರ್ಜಿಯನ್ನು ದ್ವಿ ಪ್ರತಿಯಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಪಟ್ಟಣ ಪಂಚಾಯಿತಿ ಕಚೇರಿ ಸಂಪರ್ಕಿಸಲು ಮಲೇಬೆನ್ನೂರು ಪುರಸಭೆ ಮುಖ್ಯಾಧಿಕಾರಿ ತಿಳಿಸಿದ್ದಾರೆ.

### ಜಿಲ್ಲಾಸ್ಪತ್ರೆಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಭೇಟಿ

# ಆಸ್ಪತ್ರೆಯ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಿ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾಸ್ಪತ್ರೆಗೆ ಗುರುವಾರ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಭೇಟಿ ನೀಡಿ, ಜಿಲ್ಲಾಸ್ಪತ್ರೆಯ ಕಾರ್ಯವೈಖರಿ, ಅಲ್ಲಿನ ವ್ಯವಸ್ಥೆ ಬಗ್ಗೆ ಪರಿಶೀಲಿಸಿ ವೈದ್ಯರು ಹಾಗೂ ರೋಗಿಗಳಿಂದ ಆಸ್ಪತ್ರೆಯ ಕುರಿತು ಮಾಹಿತಿ ಪಡೆದರು. ಆಸ್ಪತ್ರೆಯ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಜಿಲ್ಲಾಸ್ಪತ್ರೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಸ್ವತಃ ತಾವೇ ಖುದ್ದಾಗಿ ರೋಗಿಗಳ ವಾರ್ಡ್‌ಗೆ ಭೇಟಿ ನೀಡಿ, ಅವರ ಆರೋಗ್ಯ ವಿಚಾರಿಸುವುದರ ಜೊತೆಗೆ ಅಲ್ಲಿ ರೋಗಿಗಳಿಗೆ ನೀಡುತ್ತಿರುವ ಚಿಕಿತ್ಸಾ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದರು.

ಜಿಲ್ಲಾಸ್ಪತ್ರೆಯಲ್ಲಿನ ಔಷಧಿ ವಿತರಿಸುವ ಸ್ಥಳ, ಚುಚ್ಚುಮದ್ದು ನೀಡುವ ರೂಂ, ಸಹಾಯ ಕೇಂದ್ರ, ಎಂ.ಎಲ್‌ಸಿ ವಿಭಾಗ, ಹೊರರೋಗಿಗಳ ವಿಭಾಗದ ಅರ್ಥೋಪೆಡಿಕ್ ಒಪಿಡಿ, ಸರ್ಜಿಕಲ್ ಒಪಿಡಿ, ಡ್ರೆಸಿಂಗ್ ರೂಂ, ಫಿಜಿಯೋಥೆರಪಿ, ತುರ್ತು ಚಿಕಿತ್ಸಾ ವಿಭಾಗ, ಶಸ್ತ್ರ ಚಿಕಿತ್ಸಾ ವಿಭಾಗ, ಕಣ್ಣಿನ ಶಸ್ತ್ರಚಿಕಿತ್ಸಾ ವಿಭಾಗ, ಹೈಟೆಕ್ ಲ್ಯಾಬ್, ಹಿರಿಯ ನಾಗರಿಕರ ವಾರ್ಡ್, ಡಯಾಲಿಸಿಸ್ ವಿಭಾಗ, ಮಕ್ಕಳ ಮತ್ತು ನವಜಾತ ಶಿಶು ವಿಭಾಗ, ರಕ್ತನಿಧಿ ಕೇಂದ್ರ ಹಾಗೂ ಅಡುಗೆ ಮನೆಗೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯ ಕುರಿತು ವೀಕ್ಷಣೆ ಮಾಡಿದರು. ಅಲ್ಲದೆ ತುರ್ತು





ಚಿಕಿತ್ಸಾ ವಿಭಾಗದ ಶೌಚಾಲಯಕ್ಕೆ ಭೇಟಿ ನೀಡಿ ಪರಿಶೀಲಿಸಿದ ಅವರು, ಜಿಲ್ಲಾ ಆಸ್ಪತ್ರೆಯಲ್ಲಿನ ಶೌಚಾಲಯ ಸ್ವಚ್ಛತೆ ಕುರಿತು ಹೆಚ್ಚಿನ ದೂರುಗಳು ಕೇಳಿಬರುತ್ತವೆ. ಹೀಗಾಗಿ ಶೌಚಾಲಯವನ್ನು ಪ್ರತಿನಿತ್ಯ ನಿಯಮಿತವಾಗಿ ಸ್ವಚ್ಛವಾಗಿರಿಸಲು ತಾಕೀತು ಮಾಡಿದರು.

ಜಿಲ್ಲಾಸ್ಪತ್ರೆಯಲ್ಲಿ ವಿಕಲಚೇತನರಿಗೆ ಅಂಗವೈಕಲ್ಯ ಕುರಿತು ವೈದ್ಯಕೀಯ ಪರೀಕ್ಷೆ ನಡೆಸಿ, ಗುರುತಿನ ಚೀಟಿ ನೀಡುವ ಸಂದರ್ಭದಲ್ಲಿ ಏಕ ವೈದ್ಯರ ತಂಡ ನೀಡುವ ಬದಲಿಗೆ, ನಿಯಮಾನುಸಾರ ತಜ್ಞ ವೈದ್ಯರ ತಂಡವು ಪರಿಶೀಲಿಸಿಯೇ ವೈದ್ಯಕೀಯ ಪ್ರಮಾಣಪತ್ರ ಹಾಗೂ ಗುರುತಿನ ಪತ್ರ ನೀಡಬೇಕು ಎಂದು ಸೂಚನೆ ನೀಡಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾಸ್ಪತ್ರೆಯಲ್ಲಿ ಸ್ವಚ್ಛತೆಗೆ ಸಂಬಂಧಪಟ್ಟಂತೆ ದೂರುಗಳು ಬಂದ ಹಿನ್ನಲೆಯಲ್ಲಿ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದ್ದು, ಮಧ್ಯ ಕರ್ನಾಟಕ ಭಾಗದ ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ಜಿಲ್ಲೆ ಸೇರಿದಂತೆ ಸುತ್ತಮುತ್ತಲಿನ ಜಿಲ್ಲೆಗಳಿಂದಲೂ ಹೆಚ್ಚಿನ ಸಂಖ್ಯೆಯಲ್ಲಿ ರೋಗಿಗಳು ಈ ಆಸ್ಪತ್ರೆಗೆ ಆಗಮಿಸುತ್ತಾರೆ. ಹಾಗಾಗಿ ಆಸ್ಪತ್ರೆಗೆ ಅಗತ್ಯವಿರುವ ಕೆಲವು ಮೂಲಸೌಕರ್ಯಗಳ ಅವಶ್ಯಕತೆ ಇದೆ. ಡಿಎಂಎಫ್ ಹಾಗೂ ಕೆಎಂಇಆರ್‌ಸಿ ಅನುದಾನದಲ್ಲಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು ಹಾಗೂ ಅಭಿವೃದ್ಧಿಗೆ ಒತ್ತು ನೀಡಲಾಗುವುದು ಎಂದು ತಿಳಿಸಿದರು.

ಜಿಲ್ಲಾಸ್ಪತ್ರೆಯ ಎಲ್ಲಾ ವಿಭಾಗಗಳಲ್ಲಿಯೂ ಸಿಬ್ಬಂದಿ ಸಮರ್ಪಕವಾಗಿದ್ದು, ಆಸ್ಪತ್ರೆಯ ಕಟ್ಟಡ ನಿರ್ವಹಣೆ ಸಮರ್ಪಕವಾಗಿಲ್ಲ. ಮಳೆ ಬಂದಾಗ ನೀರು ನಿಲ್ಲುವುದು, ಸಣ್ಣಪುಟ್ಟ ದುರಸ್ಥಿಯ ಅವಶ್ಯಕತೆ ಇದೆ. ಇದರ ಜೊತೆಗೆ ಆಸ್ಪತ್ರೆಯಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಮುಂದಿನ ದಿನಗಳಲ್ಲಿ ಯಾವುದೇ ದೂರು ಬಾರದಂತೆ ರೋಗಿಗಳಿಗೆ ಅನುಕೂಲ ಮಾಡಿಕೊಡುವ ವ್ಯವಸ್ಥೆ ಮಾಡಲಾಗುವುದು ಎಂದರು.
ಅನಗತ್ಯವಾಗಿ ಎಂಎಲ್‌ಸಿ ಮಾಡಬೇಡಿ: ಕಾನೂನಿಗೆ ಸಂಬಂಧಿಸಿದ ಹಾಗೂ ದೌರ್ಜನ್ಯಕ್ಕೆ ಸಂಬಂಧಿಸಿದ ವೈದ್ಯಕೀಯ ಪ್ರಕರಣಗಳನ್ನು ನಿಯಮಾನುಸಾರ ಮಾಡಬೇಕು, ಆದರೆ ನಿಯಮಗಳಿಗೆ ವಿರುದ್ಧವಾಗಿ ಮತ್ತು ಅನಗತ್ಯವಾಗಿ ಎಂಎಲ್‌ಸಿ ಮಾಡಬೇಡಿ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ವೈದ್ಯಾಧಿಕಾರಿಗಳಿಗೆ ಸೂಚನೆ ನೀಡಿದರು. ಎಂಎಲ್‌ಸಿಯನ್ನು ಬಹಳ ಎಚ್ಚರಿಕೆಯಿಂದ ಮಾಡಬೇಕು. ಇದರ ಜೊತೆಗೆ ದಾಖಲೆಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ನಿವಾಸಿ ವೈದ್ಯಾಧಿಕಾರಿ ಡಾ.ಆನಂದ ಪ್ರಕಾಶ್ ಚಿತ್ರದುರ್ಗ ಸರ್ಕಾರಿ ವೈದ್ಯಕೀಯ ಕಾಲೇಜಿನ ವಿಶೇಷ ವೈದ್ಯಾಧಿಕಾರಿ ಡಾ.ಯುವರಾಜ್ ಸೇರಿದಂತೆ ಜಿಲ್ಲಾಸ್ಪತ್ರೆಯ ಸಿಬ್ಬಂದಿ ಇದ್ದರು.

### ಬಕ್ರೀದ್ ಹಬ್ಬದ ಪ್ರಯುಕ್ತ ಎಸ್.ಪಿ.ಕಚೇರಿಯಲ್ಲಿ ನಾಗರಿಕ ಸೌಹಾರ್ದ ಸಭೆಯಲ್ಲಿ ಎಸ್‌ಪಿ

# ಹಬ್ಬಗಳು ಸಹಬಾಳ್ವೆ, ಶಾಂತಯುತವಾಗಿ ನಡೆಯಲಿ

» **ದಾವಣಗೆರೆ**

ಸಮಾಜದ ಸಮುದಾಯಗಳು ಆಚರಿಸುವ ಹಬ್ಬಗಳ ವೇಳೆ ಅನ್ಯ ಧರ್ಮದ ಬಗ್ಗೆ ತಾತ್ಸಾರ ಮಾಡದೆ, ಶಾಂತಿಯುತವಾಗಿ ಆಚರಿಸಿದಾಗ ಮಾತ್ರ ಸಹಭಾಳ್ವೆ ಸಾಧ್ಯವಾಗಲಿದೆ ಎಂದು ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದರು.

ಅವರು ಗುರುವಾರ ಜಿಲ್ಲಾ ರಕ್ಷಣಾಧಿಕಾರಿಗಳ ಕಚೇರಿಯಲ್ಲಿ ಜೂನ್ 17 ರಂದು ನಡೆಯಲಿರುವ ಬಕ್ರೀದ್ ಹಬ್ಬದ ಪ್ರಯುಕ್ತ ನಾಗರಿಕ ಸೌಹಾರ್ದ ಸಭೆಯನ್ನು ನಡೆಸಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ ಮಾತನಾಡಿದರು.

ಹಬ್ಬಗಳನ್ನು ಸಂತೋಷದಿಂದ ಸಂಪ್ರದಾಯಿಕವಾಗಿ ಆಚರಿಸಲಾಗುತ್ತದೆ. ಈ ವೇಳೆ ಯಾವುದೇ ಪ್ರಚೋದನೆ ಸಲ್ಲದು, ಅದು ಸಾಮಾಜಿಕ ಮಧ್ಯಮವಾಗಲಿ, ಇತರೆ ಸ್ಥಳವಾಗಲಿ, ಶಾಂತಿ ಕಾಪಾಡಿಕೊಳ್ಳಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನೆ ನೀಡುವ ಪೋಸ್ಟ್ ಹಾಕುವುದಾಗಲಿ ಅಥವಾ ಫೇಕ್ ನ್ಯೂಸ್ ಮಾಡುವುದಾಗಲಿ ಅಥವಾ ಇನ್ನಾವುದೇ ಅಚಾತುರ್ಯ ಘಟನೆಗಳನ್ನಾಗಲಿ ಮಾಡಿದಲ್ಲಿ ಕಾನೂನು ರೀತಿ ಕ್ರಮ ಜರುಗಿಸಲಾಗುವುದು.

ಹಾಗೂ ಮದ್ಯಪಾನ ಸೇವಿಸಿ ವಾಹನಗಳನ್ನು ಚಾಲನೆ ಮಾಡುವುದು, ಇದು ಯಾವುದು




ಕೂಡ ನಡೆಯಬಾರದು. ಇಂತಹ ಘಟನೆಗಳು ಕಂಡು ಬಂದಲ್ಲಿ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

ಬಕ್ರೀದ್ ಹಬ್ಬದ ಸಂಭ್ರಮಾಚರಣೆ ವೇಳೆ ರಸ್ತೆಗಳಲ್ಲಿ ವೀಲಿಂಗ್ ಮಾಡುವುದು .ಕರ್ಕಶವಾಗಿ ಶಬ್ದಹೊರಡಿಸುವ ಬೈಕ್ ಗಳನ್ನು ಓಡಿಸಿ ಇದರಿಂದ ಶಾಂತಿ ಭಂಗ ತರುವವರ ವಿರುದ್ದ ಪೊಲೀಸರು ಕಣ್ಗಾವಲಿಟ್ಟಿದ್ದು, ಕಾನೂನು ಉಲ್ಲಂಘಿಸುವವರ ವಿರುದ್ದ ನಿರ್ಧಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿ ಎಲ್ಲರೂ ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕೆಂದು ಮನವಿ ಮಾಡಿ ಸಮಾಜದ ಹಿರಿಯರು ಯುವಕರುಗಳಿಗೆ ಬುದ್ದಿಮಾತು ಹೇಳುವ ಮೂಲಕ ಅವರನ್ನು ಸರಿದಾರಿಯಲ್ಲಿ ನಡೆಸುವಂತಾಗಬೇಕೆಂದರು. ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕಾ, ಹೆಚ್ಚುವರಿ ರಕ್ಷಣಾಧಿಕಾರಿ ವಿಜಯಕುಮಾರ್ ಎಂ ಸಂತೋಷ್, ಮಂಜುನಾಥ್ ಉಪಸ್ಥಿತರಿದ್ದರು.

## ಚುನಾವಣಾ ವರ್ಗಾವಣೆಯಾಗಿ ಜಿಲ್ಲೆಗೆ ಎಡಿಸಿ ಸೈಯ್ಯದಾ ಆಫ್ರೀನ್ ಭಾನು ಬಳ್ಳಾರಿಗೆ ಬೀಳ್ಕೊಡುಗೆ



» **ದಾವಣಗೆರೆ**

ಲೋಕಸಭಾ ಚುನಾವಣಾ ನಿಮಿತ್ತ ದಾವಣಗೆರೆ ಜಿಲ್ಲೆಗೆ ವರ್ಗಾವಣೆಯಾಗಿ ಬಂದಿದ್ದ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿಗೆ ಜೂನ್ 13 ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆತ್ಮೀಯ ಬೀಳ್ಕೊಡುಗೆ ನೀಡಲಾಯಿತು. ಕಾರ್ಯಕ್ರಮವು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರ ಅಧ್ಯಕ್ಷತೆಯಲ್ಲಿ ನಡೆಯಿತು. ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿಯವರು ಅತ್ಯುತ್ತಮವಾದ ಅಧಿಕಾರಿಗಳ ತಂಡ ಇದ್ದುದರಿಂದ ಲೋಕಸಭಾ ಚುನಾವಣೆಯನ್ನು ಯಾವುದೇ ಸಮಸ್ಯೆಗಳು ಬಾರದಂತೆ ಮತ್ತು ಸುಲಲಿತವಾಗಿ ನಿರ್ವಹಣೆ ಮಾಡಲು ಸಾಧ್ಯವಾಯಿತು. ಚುನಾವಣಾ ಸಂದರ್ಭದಲ್ಲಿ ಹಲವು ಅಧಿಕಾರಿಗಳ ವರ್ಗಾವಣೆ ಸಾಮಾನ್ಯವಾಗಿರುತ್ತದೆ. ಆದರೂ ಸಹ ಹೊಸದಾಗಿ ಜಿಲ್ಲೆಗೆ ಆಗಮಿಸಿ ಎಲ್ಲರೊಟ್ಟಿಗೆ ಅತ್ಯುತ್ತಮವಾದ ಕೆಲಸ ಮಾಡಿದ್ದಾರೆ ಎಂದು ಅಪರ ಜಿಲ್ಲಾಧಿಕಾರಿಯವರ ಕೆಲಸವನ್ನು ಪ್ರಶಂಸೆ ಮಾಡಿದರು.

ಈ ವೇಳೆ ಚುನಾವಣಾ ನಿಮಿತ್ತ ಜಿಲ್ಲೆಯಿಂದ ಬೆಳಗಾವಿಗೆ ವರ್ಗಾವಣೆಯಾಗಿ ತೆರಳಿದ್ದ ಪಿ.ಎನ್.ಲೋಕೇಶ್ ಅವರು ವರದಿ ಮಾಡಿಕೊಂಡಿದ್ದು ಸ್ವಾಗತಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿಯವರು ಇಲ್ಲಿನ ಸಿಬ್ಬಂದಿಯವರು ನನ್ನೊಟ್ಟಿಗೆ ಹಗಲಿರಳು ಕೆಲಸ ಮಾಡಿದರು. ಯಾವುದೇ ಒತ್ತಡವಿಲ್ಲದೆ ಎಲ್ಲರೊಟ್ಟಿಗೆ ಕೆಲಸ ಮಾಡಲು ಸಹಕಾರಿಯಾಗಿದ್ದು ಸೇವಾ ಅವಧಿಯಲ್ಲಿ ಅವಿಸ್ಮರಣೀಯ ದಿನಗಳಾಗಿವೆ ಎಂದರು. ಉಪವಿಭಾಗಾಧಿಕಾರಿ ದುರ್ಗಶ್ರೀ, ಭೂಸ್ವಾಧೀನಾಧಿಕಾರಿ ಉದಯಕುಮಾರ್ ಕುಂಬಾರ್, ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ; ಚಂದ್ರಶೇಖರ್ ಸುಂಕದ್, ಅಲ್ಪಸಂಖ್ಯಾತರ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ್ ಮಠದ್, ಸ್ಮಾರ್ಟ್ ಸಿಟಿ ಎಂ.ಡಿ. ವೀರೇಶ್ ಕುಮಾರ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಎಸ್.ಎಸ್.ಎಲ್.ಸಿ-2 ಪರೀಕ್ಷೆ, ಜೂನ್ 14 ರಿಂದ 22 ರವರೆಗೆ ಕೇಂದ್ರ ಸುತ್ತ 144 ಸೆಕ್ಷನ್ ಜಾರಿ

» **ದಾವಣಗೆರೆ**

ಎಸ್.ಎಸ್.ಎಲ್.ಸಿ ಪರೀಕ್ಷೆ–2 ಜಿಲ್ಲೆಯ 20 ಕೇಂದ್ರಗಳಲ್ಲಿ ಜೂನ್ 14 ರಿಂದ 22 ರವರೆಗೆ ನಡೆಯಲಿದ್ದು ಸುಗಮ ಪರೀಕ್ಷೆಗಾಗಿ 144 ಅನ್ವಯ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಆದೇಶಿಸಿದ್ದಾರೆ. ಜೂನ್ 14 ರಿಂದ 22 ರವರೆಗೆ ಜಿಲ್ಲೆಯ ಚನ್ನಗಿರಿ–5, ದಾವಣಗೆರೆ ಉತ್ತರ–3, ದಕ್ಷಿಣ 3, ಹರಿಹರ–4,ಹೊನ್ನಾಳಿ–2, ಜಗಳೂರು–3 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಕೇಂದ್ರಗಳ ಸುತ್ತಮುತ್ತ ಜೆರಾಕ್ಸ್ ಅಂಗಡಿ, ಇಂಟರ್‌ನೆಟ್ ಸೆಂಟರ್‌ಗಳನ್ನು ಪರೀಕ್ಷಾ ದಿನದಂದು ಮುಚ್ಚಲು ಆದೇಶಿಸಲಾಗಿದೆ.


**ಪ್ರಮುಖ ಸುದ್ದಿ**

# ರಾಜಕಾಲುವೆಯಲ್ಲಿ ಹರಿದ ಮಳೆ ನೀರಿನಿಂದ ಡಾಂಬರ್ ರಸ್ತೆ ಕುಸಿತ: ಕಾಟಪ್ಪನಹಟ್ಟಿ ಗೊಲ್ಲರಹಟ್ಟಿ ನಿವಾಸಿಗಳಿಗೆ ಆತಂಕ

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಚಳ್ಳಕೆರೆ ಮಧ್ಯಭಾಗದಲ್ಲಿ ಹಾದುಹೋಗಿರುವ ರಾಜಕಾಲುವೆ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಕೈಗೊಂಡು ಪೂರ್ಣಗೊಳಿಸಿ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯನ್ನು ನಿವಾರಿಸಬೇಕೆಂದು ನಗರದ ಎರಡನೇ ವಾರ್ಡ್ ವ್ಯಾಪ್ತಿಯ ಕಾಟಪ್ಪನಹಟ್ಟಿ ಗೊಲ್ಲರಹಟ್ಟಿಯ ನಿವಾಸಿಗಳು ಪೌರಾಯುಕ್ತರಿಗೆ ಲಿಖಿತ ಮೂಲಕ ಮನವಿ ಮಾಡಿದ್ದಾರೆ.

ಕಾಟಪ್ಪನಹಟ್ಟಿ ಗೊಲ್ಲರಹಟ್ಟಿಯ ಮುಖಂಡರಾದ ನಾಗಣ್ಣ, ಗೌಡಜ್ಜ, ವಿ.ರಂಗಸ್ವಾಮಿ, ಈರಣ್ಣ, ಎನ್.ಚಿಕ್ಕಣ್ಣ, ಎಚ್.ಮಹಲಿಂಗಪ್ಪ, ಎಸ್.ಕೃಷ್ಣಮೂರ್ತಿ, ಅಜ್ಜಣ್ಣ, ಕೆ.ರಾಜಣ್ಣ, ವೀರಭದ್ರಪ್ಪ, ಶಿವಮೂರ್ತಿ, ರಂಗಸ್ವಾಮಿ, ಅಣ್ಣಯ್ಯ, ಡಿ.ವೀರೇಶ್, ಕೆಂಪಮಂಜ ಮುಂತಾದರು ಇತ್ತೀಚೆಗೆ ಬಿದ್ದ ಬಾರಿಮಳೆಗೆ ಮೂರ್‍ನಾಲ್ಕು





ಬಾರಿ ರಾಜಕಾಲುವೆ ಭಾರಿಪ್ರಮಾಣದ ನೀರಿನಿಂದ ಹರಿದಿದ್ದು, ನೀರಿನ ಹರಿವಿಗೆ ಪಕ್ಕದ ಡಾಂಬರ್ ರಸ್ತೆ ಕಿತ್ತುಹೋಗಿದೆ, ಪರಿಸ್ಥಿತಿ ಹೀಗೆ ಮುಂದುವರೆದರೆ ಕಾಟಪ್ಪನಹಟ್ಟಿ ಗೊಲ್ಲರಹಟ್ಟಿಯ ಮನೆಗಳಿಗೆ ನೀರು ನುಗ್ಗಿ ಅಪಾರವಾದ ಹಾನಿ ಉಂಟಾಗುವ ಸಂಭವಿದೆ.

ಪ್ರಸ್ತುತ ರಾಜಕಾಲುವೆಯಲ್ಲಿ ಜಾಲಿಗಿಡ ಸೇರಿದಂತೆ ಇತರೆ ಗಿಡಗಳು ಬೆಳೆದು ಕಾರಣ ನೀರು ಸರಾಗವಾಗಿ ಹರಿಲು ಸಾಧ್ಯವಾಗುತ್ತಿಲ್ಲ. ಎಲ್ಲದರಂರಲ್ಲೇ ನೀರು ನಿಂತು ಸೊಳ್ಳೆಗಳ ತಾಣವಾಗಿದೆ. ವಿಷ ಜಂತುಗಳಾದ ಚೇಳು, ಹಾವು ನೀರಿನಲ್ಲಿ ಹರಿದು ಮನೆಗಳತ್ತದಾವಿಸುತ್ತಿವೆ. ಇದರಿಂದ ಮಕ್ಕಳು, ವೃದ್ದರು ಅಪಾಯಕ್ಕೀಡಾಗುವ ಸಂಭವವೇ ಹೆಚ್ಚಿದೆ. ಆದ್ದರಿಂದ ಕೂಡಲೇ ರಾಜಕಾಲುವೆ ಕಾಮಗಾರಿ ಕೈಗೆತ್ತಿಕೊಳ್ಳಬೇಕು. ಕ್ಷೇತ್ರದ ಶಾಸಕರಿಗೆ ಈ ಬಗ್ಗೆ ಮಾಹಿತಿ ನೀಡಲಾಗಿದೆ, ನಗರಸಭೆ ಕ್ರಮ ಕೈಗೊಳ್ಳದೇ ಇದ್ದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಎದುರು ವಾರ್ಡ್‌ನ ನೂರಾರು ನಾಗರೀಕರು ಪ್ರತಿಭಟನೆ ಮಾಡಲು ಸಜ್ಜಾಗಿದ್ದಾರೆ ಎಂದರು.

ಮನವಿ ಸ್ವೀಕರಿಸಿ ಮಾತನಾಡಿದ ಪೌರಾಯುಕ್ತ ಕೆ.ಜೀವನ್‌ಕಟ್ಟಿಮನಿ, ಕಾಟಪ್ಪನಹಟ್ಟಿಗೊಲ್ಲರಹಟ್ಟಿಯನಿವಾಸಿಗಳು ನೀಡಿದ ಮನವಿ ಸ್ವೀಕರಿಸಲಾಗಿದೆ. ಕಳೆದ ಸುಮಾರು 15 ದಿನಗಳಿಂದ ರಾಜಕಾಲುವೆ ಕಾಮಗಾರಿ ದುರಸ್ಥಿತಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಹಂತ, ಹಂತವಾಗಿ ಈ ಕಾರ್ಯ ನಡೆಸಲಾಗುವುದು. ಅಲ್ಲಿನ ನಿವಾಸಿಗಳಿಗೆ ಆಗುತ್ತಿರುವ ಸಮಸ್ಯೆಯನ್ನು ಶಾಸಕರು ಹಾಗೂ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

## ಫಾಸ್ಟ್ ನ್ಯೂಸ್

### ಎಲ್‌ಕೆಜಿ, ಯುಕೆಜಿ ಪ್ರಾರಂಭ: ವಿರೋಧಿಸಿ ಬಿಇಓಗೆ ಮನವಿ



» **ಹೊಸದುರ್ಗ**

ಅಂಗನವಾಡಿ ವ್ಯವಸ್ಥೆಗೆ ಧಕ್ಕೆ ತರುವಂತಹ ಶಾಲೆಗಳಲ್ಲಿ ಎಲ್.ಕೆ.ಜಿ. ಮತ್ತು ಯು.ಕೆ.ಜಿ. ಪ್ರಾರಂಭಿಸುತ್ತಿರುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಫೆಡರೇಷನ್ ತಾಲ್ಲೂಕು ಸಮಿತಿ ಎ.ಐ.ಟಿ.ಯು.ಸಿ. ಸಂಘದ ಮಹಿಳೆಯರು ಬುಧವಾರ ಪಟ್ಟಣದ ತಾಲೂಕು ಶಿಕ್ಷಣ ಇಲಾಖೆಗೆ ತೆರಳಿ ಎಐಟಿಯುಸಿ ಅಧ್ಯಕ್ಷ ಕುಮಾರಸ್ವಾಮಿ ಎನ್.ಸಿ. ನೇತೃತ್ವದಲ್ಲಿ ತೆರಳಿ ಬಿಇಒ ಸೈಯಾದ್‌ಮೋಸಿನ್ ಅವರಿಗೆ ಮನವಿ ಸಲ್ಲಿಸಿದರು. ನೇತೃತ್ವ ವಹಿಸಿದ್ದ ಎಐಟಿಯುಸಿ ಅಧ್ಯಕ್ಷ ಕುಮಾರಸ್ವಾಮಿ ಎನ್.ಸಿ. ಮಾತನಾಡಿ ಈಗಾಗಲೇ ಸರ್ಕಾರ ಆರಂಭಿಸಿರುವ ಪಬ್ಲಿಕ್ ಶಾಲೆಗಳಲ್ಲಿ ಎಲ್.ಕೆ.ಜಿ. ಮತ್ತು ಯು.ಕೆ.ಜಿ ಗಳನ್ನು ನಡೆಸಲಾಗುತ್ತಿದೆ. ಈ ಎಲ್ಲಾ ಪ್ರಕ್ರಿಯೆಗಳಿಂದಾಗಿ ಅಂಗನವಾಡಿ ಕೇಂದ್ರಗಳಿಗೆ ದಾಖಲಾಗಬೇಕಾದ 3 ರಿಂದ ಆರು ವರ್ಷದೊಳಗಿನ ವಯೋಮಾನದ ಮಕ್ಕಳು ವಿಘಟಿತರಾಗಿ ಶಾಸನಾತ್ಮಕವಾಗಿ ರೂಪಿತಗೊಂಡಿರುವ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಸವಲತ್ತುಗಳಿಂದ ವಂಚಿತರಾಗಲಿದ್ದಾರೆ ಎಂದರು. ಅಂಗನವಾಡಿ ಫೆಡರೇಷನ್, ತಾಲ್ಲೂಕು ಸಮಿತಿಯ ಅಧ್ಯಕ್ಷೆ ಜಿ.ಸುಮಿತ್ರಾಬಾಯಿ ಮಾತನಾಡಿರಾಜ್ಯ ಶಿಕ್ಷಣ ನೀತಿ ರೂಪಿತವಾಗುವ ಮುನ್ನವೇ ಶಾಲಾ ಶಿಕ್ಷಣ ಇಲಾಖೆಯು ಅಂಗನವಾಡಿಗಳಿಗೆ ತೆರಳಬೇಕಾದ 3 ರಿಂದ 6 ವರ್ಷ ವಯೋಮಾನದ ಮಕ್ಕಳಿಗಾಗಿ ಶಾಲೆಗಳಲ್ಲಿ ಎಲ್.ಕೆ.ಜಿ ಮತ್ತು ಯು.ಕೆ.ಜಿ ತರಗತಿಗಳನ್ನು ಪ್ರಾರಂಭಿಸಲು ಅವಕಾಶ ಮಾಡಿಕೊಡುತ್ತಿರುವುದು ಸಮಗ್ರ ಶಿಶು ಅಭಿವೃದ್ಧಿಯಂತಹ ಮಹತ್ವದ ಯೋಜನೆಗೆ ವಿರುದ್ಧವಾದ ಪ್ರಕ್ರಿಯೆಯಾಗಿರುತ್ತದೆ ಎಂದರು. ಕಾರ್ಯದರ್ಶಿ ಎಸ್.ಗೀತಾಂಜಲಿ ಮಾತನಾಡಿ ರಾಜ್ಯ ಸರ್ಕಾರ ಎಸ್‌ಡಿಎಂಸಿ ಮೂಲಕ ಶಾಲೆಗಳಲ್ಲಿ ಎಲ್.ಕೆ.ಜಿ–ಯು.ಕೆ.ಜಿ ಯನ್ನು ಪ್ರಾರಂಭಿಸುವ ಮೂಲಕ ಪ್ರಕ್ರಿಯೆಗಳನ್ನು ತಡೆಯಬೇಕು. .ಈ ಸಂಧರ್ಬದಲ್ಲಿ ಉಪಾಧ್ಯಕ್ಷೆ ಶ್ರೀಮತಿ ಸೌಭಾಗ್ಯ, ಖಜಾಂಚಿ ಶ್ರೀಮತಿ ರೂಪ ಸೇರಿದಂತೆ ತಾಲೂಕು ವೃತ್ತದ ಎಲ್ಲಾ ಪದಾಧಿಕಾರಿಗಳು ಹಾಗೂ ಕಾರ್ಯಕರ್ತೆಯರು ಭಾಗವಹಿಸಿದ್ದರು.

### ಫಸಲ್ ಭೀಮಾ ಯೋಜನೆಗೆ ನೋಂದಣಿ ಪ್ರಕ್ರಿಯೆ ಪ್ರಾರಂಭ

» **ಹೊಸದುರ್ಗ**

ತಾಲ್ಲೂಕಿನಲ್ಲಿ 2024–25ನೇ ಸಾಲಿನ ಮುಂಗಾರು ಹಂಗಾಮುಗಳಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಜಾರಿಗೊಳಿಸಿ ಅಧಿಸೂಚಿಸಲಾಗಿದ್ದು, ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿರುತ್ತದೆ ಎಂದು ತಾಲ್ಲೂಕು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಸಿ.ಎಸ್ ಈಶ ತಿಳಿಸಿದ್ದಾರೆ.ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಆಸಕ್ತ ರೈತ ಬಾಂದವರು ನಿಗಧಿತ ದಿನಾಂಕದೊಳಗೆ ಬೆಳೆ ವಿಮೆಗೆ ನೋಂದಾವಣೆ ಮಾಡಿಸಬೇಕು ಅಂತಿಮ ಸಮಯದಲ್ಲಿ ಜನದಟ್ಟಣೆಯಿಂದಾಗಿ ನೋಂದಾಣಿಯಲ್ಲಿ ತಪ್ಪುಗಳು ಸಂಭವಿಸಿ, ವಿಮೆ ಪರಿಹಾರ ಬಾರದಿರುವ ಸಂಭವವಿರುತ್ತದೆ. ಇದಕ್ಕೆ ಅವಕಾಶ ಕೊಡದೇ ಸಕಾಲದಲ್ಲಿ ನೋಂದಾವಣೆ ಮಾಡಲು ಮನವಿ ಮಾಡಿದ್ದಾರೆ.ಗ್ರಾಮ ಪಂಚಾಯಿತಿ ಮಟ್ಟದ ವಿಮಾ ಘಟಕಕ್ಕೆ:ಸಂಬಂಧಿಸಿದಂತೆ ರಾಗಿ (ಮಳೆಯಾಶ್ರಿತ), ಬೆಳೆಯನ್ನು ಮುಂಗಾರು ಹಂಗಾಮಿಗೆ ಬೆಳೆ ವಿಮೆಗೆ ಅಧಿಸೂಚನೆ ಮಾಡಲಾಗಿದೆ. ಕಸಬಾ ಹೋಬಳಿ ಮಟ್ಟದ ವಿಮಾ ಘಟಕಕ್ಕೆ, ಈರುಳ್ಳಿ (ಮ.ಆ), ಎಳ್ಳು (ಮ.ಆ),ಕೆಂಪು ಮೆಣಸಿನಕಾಯಿ (ಮ.ಆ), ಟಮೋಟೋ, ತೊಗರಿ (ಮ.ಆ), ನವಣೆ (ಮ.ಆ), ನೆಲಗಡಲೆ (ಶೇಂಗಾ) (ಮ.ಆ), ಭತ್ತ (ನೀ), ರಾಗಿ (ನೀ), ರಾಗಿ (ಮ.ಆ), ಸಾವೆ (ಮ.ಆ), ಸೂರ್ಯಕಾಂತಿ (ಮ.ಆ), ಹತ್ತಿ (ಮ.ಆ), ಹುರುಳಿ (ಮ.ಆ), ಹೆಸರು (ಮ.ಆ).ಮುಸುಕಿನ ಜೋಳ (ಮ.ಆ), ಮಾಡದಕೆರೆ ಹೋಬಳಿ ಮಟ್ಟಕ್ಕೆ ಹೆಸರು (ಮ.ಆ), ಎಳ್ಳು (ಮ.ಆ), ತೊಗರಿ (ಮ.ಆ), ನವಣೆ (ಮ.ಆ), ನೆಲಗಡಲೆ (ಶೇಂಗಾ) (ಮ.ಆ), ಸಾವೆ (ಮ.ಆ), ಹತ್ತಿ (ಮ.ಆ), ಹುರುಳಿ (ಮ.ಆ). ಮುಸುಕಿನ ಜೋಳ(ಮ.ಆ), ರಾಗಿ (ಮ.ಆ) ನಿಗದಿ ಮಾಡಲಾಗಿದೆ. ಮತ್ತೋಡು ಹೋಬಳಿ ಮಟ್ಟಕ್ಕೆ ಹೆಸರು (ಮ.ಆ), ಎಳ್ಳು (ಮ.ಆ), ತೊಗರಿ (ಮ.ಆ), ನವಣೆ (ಮ.ಆ), ನೆಲಗಡಲೆ (ಶೇಂಗಾ) (ಮ.ಆ), ಸಾವೆ (ಮ.ಆ), ಹತ್ತಿ (ಮ.ಆ), ಹುರುಳಿ (ಮ.ಆ). ಮುಸುಕಿನ ಜೋಳ (ಮ.ಆ), ರಾಗಿ (ಮ.ಆ), ಶ್ರೀರಾಂಪುರ ಹೋಬಳಿ ಮಟ್ಟಕ್ಕೆ ಹೆಸರು (ಮ.ಆ), ಎಳ್ಳು (ಮ.ಆ), ಜೋಳ (ಮ.ಆ), ತೊಗರಿ (ಮ.ಆ), ನವಣೆ (ಮ.ಆ), ನೆಲಗಡಲೆ (ಶೇಂಗಾ) (ಮ.ಆ), ಸಾವೆ (ಮ.ಆ), ಹುರುಳಿ (ಮ.ಆ). ಬೆಳೆಗಳಿಗೆ ವಿಮೆಗೆ ನೋಂದಾಯಿಸಲು ಅಧಿಸೂಚನೆ ಮಾಡಲಾಗಿದೆ.

**ಜೂನ್ 18 ರಂದು ಯೋಗದ ಮಹತ್ವ ಸಾರಲು ಬೃಹತ್ ಜಾಗೃತಿ ಜಾಥ**

# 10ನೇ ಅಂತರಾಷ್ಟ್ರೀಯ ಯೋಗ ದಿನಕ್ಕೆ ಸಿದ್ದತೆ

» **ಚಿತ್ರದುರ್ಗ**

ಜಿಲ್ಲಾಡಳಿತ, ಆಯುಷ್ ಇಲಾಖೆ ವತಿಯಿಂದ ಬರುವ ಜೂನ್ 21 ರಂದು 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಗೆ ಸಲಕ ಸಿದ್ದತೆ ಮಾಡಿಕೊಳ್ಳಲಾಗುತ್ತಿದೆ. ಯೋಗ ದಿನಾಚರಣೆ ಯಶಸ್ಸಿಗೆ ಸರ್ಕಾರದ ಇತರೆ ಇಲಾಖೆಗಳು ಸೇರಿದಂತೆ ಜಿಲ್ಲೆಯ ವಿವಿಧ ಯೋಗ ಸಂಸ್ಥೆಗಳು ಕೈ ಜೋಡಿಸಿವೆ.

ಈ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ನೇತೃತ್ವದಲ್ಲಿ ಜರುಗಿದ ಸಭೆಯಲ್ಲಿ ಯೋಗ ದಿನಾಚರಣೆ ಯಶಸ್ವಿಗೆ ಚರ್ಚಿಸಿ, ನೀಲನಕ್ಷೆ ರೂಪಿಸಲಾಯಿತು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಜೂನ್ 21 ರಂದು ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಸಕಲ ಸಿದ್ದತೆ ಮಾಡಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ 7.00 ಗಂಟೆಯಿಂದ 7.45 ರವರೆಗೆ ಸುಮಾರು 2000 ಸಾವಿರಕ್ಕೂ ಅಧಿಕ ಯೋಗಾಸಕ್ತರು ಸಾಮೂಹಿಕ ಯೋಗಾಭ್ಯಾಸ ಮಾಡುವ ಮೂಲಕ ಅಂತರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಪಾಲ್ಗೊಳ್ಳುವರು. ನಂತರ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಗರ ಸಭೆಯಿಂದ ಮೈದಾನ ಸ್ವಚ್ಛಗೊಳಿಸಬೇಕು. ಜಿಲ್ಲಾ ಆಯುಷ್ ಇಲಾಖೆಯಿಂದ ಮ್ಯಾಟ್ ಹಾಸುವುದರೊಂದಿಗೆ ಮೈದಾನವನ್ನು ಯೋಗಾಭ್ಯಾಸಕ್ಕೆ ಸಜ್ಜುಗೊಳಿಸಬೇಕು. ಯೋಗದಲ್ಲಿ ಪಾಲ್ಗೊಳ್ಳುವರಿಗೆ ತೊಂದರೆಯಾಗದಂತೆ ಮೈದಾನದ ಸುತ್ತಲಿನ ಸರ್ಕಾರಿ ಕಚೇರಿ ಹಾಗೂ ಶಾಲೆಗಳ ಶೌಚಾಲಯಗಳನ್ನು ತೆರದಿಡಬೇಕು. ಆಯುಷ್ ಇಲಾಖೆ ಯೋಗಾಭ್ಯಾಸದಲ್ಲಿ ಪಾಲ್ಗೊಳ್ಳುವವರಿಗೆ ಶುದ್ಧ ಕುಡಿಯುವ ನೀರು ಹಾಗೂ ಉಪಹಾರದ ವ್ಯವಸ್ಥೆ ಮಾಡಬೇಕು. ತುರ್ತು ಸಂದರ್ಭಕ್ಕಾಗಿ ಆಬ್ಯುಲೆನ್ಸ್ ಹಾಗೂ ಅಗ್ನಿಶಾಮಕ ವಾಹನಗಳನ್ನು ಸನ್ನದ್ಧವಾಗಿ ಇರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಈ ಬಾರಿಯ ಅಂತರಾಷ್ಟ್ರೀಯ ಯೋಗ ದಿನಾಚರಣೆಗೆ ಪೊಲೀಸ್ ಇಲಾಖೆಯು ಕೈ ಜೋಡಿಸಿದ್ದು, ಎಲ್ಲಾ ಪೊಲೀಸ್ ಸಿಬ್ಬಂದಿ ಹಳೆಮಾಧ್ಯಮ ಆವರಣದಲ್ಲಿನ ಸಾಮೂಹಿಕ ಯೋಗಾಭ್ಯಾಸದಲ್ಲಿ ಪಾಲ್ಗೊಳ್ಳಲಿದ್ದಾರೆ. ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಪ್ರತಿ ಬಾರಿ 'ಯೋಗ ದಿನಾಚರಣೆಯಂದು ಪೊಲೀಸ್ ಇಲಾಖೆಯಿಂದ ಸಶಸ್ತ್ರ ಮೀಸಲು ಪಡೆಯ ಮೈದಾನದಲ್ಲಿ ಪೊಲೀಸ್ ಸಿಬ್ಬಂದಿ ಪ್ರತ್ಯೇಕವಾಗಿ ಯೋಗಭ್ಯಾಸ ಮಾಡುತ್ತಿದ್ದರು. ಇದರ ಬದಲಾಗಿ ಪೊಲೀಸ್ ಸಿಬ್ಬಂದಿ ಆಯುಷ್ ಇಲಾಖೆ ವತಿಯಿಂದ ಆಯೋಜಿಸುವ ಯೋಗ ದಿನಾಚರಣೆಯಲ್ಲಿ ಭಾಗವಹಿಸುವರು' ಎಂದು ಆಯುಷ್ ಇಲಾಖೆ ಅಧಿಕಾರಿಗಳಿಗೆ ಈಗಾಗಲೇ ತಿಳಿಸಿದ್ದಾರೆ ಎಂದು ಆಯುಷ್ ವೈದ್ಯಾಧಿಕಾರಿ ಡಾ.ಶಿವಕುಮಾರ್ ಸಭೆಯಲ್ಲಿ ಮಾಹಿತಿ ನೀಡಿದರು.

**ಯೋಗದ ಮಹತ್ವ ಸಾರಲು ಜಾಗೃತಿ ಜಾಥ:** ಅಂತರಾಷ್ಟ್ರಿಯ ಯೋಗ ದಿನಾಚರಣೆ ಪೂರ್ವಭಾವಿಯಾಗಿ ಜನರಲ್ಲಿ ಯೋಗದ ಮಹತ್ವ ಸಾರಲು ಜೂನ್ 18 ರಂದು ಬೃಹತ್ ಜಾಗೃತಿ ಜಾಥವನ್ನು ಹಮ್ಮಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ 7 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಜಿಲ್ಲಾಧಿಕಾರಿಗಳು ಜಾಥಕ್ಕೆ ಹಸಿರು ನಿಶಾನೆ ತೋರುವರು. ಜಿಲ್ಲೆಯ ಯೋಗ ಸಂಸ್ಥೆಗಳು, ಆಯುರ್ವೇದ ಕಾಲೇಜು ವಿದ್ಯಾರ್ಥಿಗಳು ಹಾಗೂ ಚಿತ್ರದುರ್ಗ ನಗರದಲ್ಲಿನ ಎಲ್ಲಾ ಸರ್ಕಾರಿ ಕಚೇರಿ ಸಿಬ್ಬಂದಿ ಜಾಗೃತಿ ಜಾಥದಲ್ಲಿ ಪಾಲ್ಗೊಳ್ಳುವರು. ಓನಕೆ ಒಬವ್ವ ವೃತ್ತ, ಮದಕರಿ ನಾಯಕ ವೃತ್ತ, ರಂಗಯ್ಯನ ಬಾಗಿಲು, ದೊಡ್ಡಪೇಟೆ, ಉಚ್ಚಂಗೆಲ್ಲಮ್ಮ ದೇವಾಸ್ಥಾನ ಬೀದಿ, ಆನೆ ಬಾಗಿಲು, ಗಾಂಧಿ ವೃತ್ತ, ಎಸ್.ಬಿ.ಐ ವೃತ್ತದ ಮೂಲಕ ಜಾಥ ಹಳೆ ಮಾಧ್ಯಮಿಕ ಆವರಣದಲ್ಲಿ ಸಂಪನ್ನಗೊಳ್ಳಲಿದೆ.

**10 ದಿನಗಳ ಯೋಗೋತ್ಸವ :** ಯೋಗದ ಮಹತ್ವವನ್ನು ಹೆಚ್ಚು ಜನರಿಗೆ ತಿಳಿಸಿ, ಜನರ ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಮಾಡುವ ದೃಷ್ಠಿಯಿಂದ ಆಯುಷ್ ಇಲಾಖೆ ರಾಜ್ಯದಲ್ಲಿ ಜೂನ್.10 ರಿಂದ ಜೂನ್ 20ರ ವರೆಗೆ 10 ದಿನಗಳ ಯೋಗೋತ್ಸವ ಆಯೋಜನೆ ಮಾಡಿದೆ. ಇದರಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ವಿವಿಧ ಇಲಾಖೆಗಳ ಸರ್ಕಾರದ ಅಂಗ ಸಂಸ್ಥೆಗಳು, ಸರ್ಕಾರೇತರ ಸಂಸ್ಥೆಗಳಲ್ಲಿ ಸಾಮೂಹಿಕ ಯೋಗ ತರಬೇತಿಯನ್ನು ನುರಿತ ಯೋಗ ಶಿಕ್ಷಕರಿಂದ ನೀಡಲಾಗುತ್ತಿದೆ. ನಗರದ ಎಲ್.ಐ.ಸಿ ಕಚೇರಿ, ಐಮಂಗಲದ ಪೊಲೀಸ್ ತರಬೇತಿ ಕೇಂದ್ರ, ಗೋನೂರಿನ ನಿರಾಶ್ರಿತರ ಪರಿಹಾರ ಕೇಂದ್ರ, ಜಿಲ್ಲಾ ಕಾರಾಗೃಹ ಹಾಗೂ ಜಿಲ್ಲೆಯ ಎಲ್ಲಾ ಹಾಸ್ಟೆಲ್‌ಗಳಲ್ಲಿ ಈಗಾಗಲೇ ಯೋಗ ತರಬೇತಿಯನ್ನು ನೀಡಲಾಗುತ್ತಿದೆ. ಜೂನ್ 15 ಹಾಗೂ 16 ರಂದು ಎಲ್ಲಾ ಹಾಸ್ಟೆಲ್‌ಗಳಲ್ಲಿ ಯೋಗೋತ್ಸವ ಆಚರಣೆ ಮಾಡಲಾಗುವುದು. ಇದರೊಂದಿಗೆ ವಿವಿಧ ತಾಲ್ಲೂಕು ಕೇಂದ್ರಗಳ ಪ್ರಮುಖ ಕಾಲೇಜುಗಳಲ್ಲಿ ಸಹ ಯೋಗೋತ್ಸವ ಆಚರಿಸಲು ಯೋಜನೆ ರೂಪಿಸಿರುವುದಾಗಿ ಎಂದು ಆಯುಷ್ ವೈದ್ಯಾಧಿಕಾರಿ ಡಾ.ಶಿವಕುಮಾರ್ ಸಭೆಯಲ್ಲಿ ತಿಳಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೆಚ್.ಜೆ.ಕುಮಾರಸ್ವಾಮಿ, ಡಿ.ಹೆಚ್.ಓ ಡಾ.ರೇಣುಪ್ರಸಾದ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ, ಮಹಿಳಾ ಮತ್ತು ಮಕ್ಕಳ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಪಿಯು ಉಪನಿರ್ದೇಶಕ ಪುಟ್ಟಸ್ವಾಮಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ನಾಸೀರ್‌ವುದ್ದೀನ್, ನಗರಸಭೆ ಆಯುಕ್ತೆ ರೇಣುಕಾ.ಎಂ ಸೇರಿದಂತೆ ಜಿಲ್ಲೆಯ ವಿವಿಧ ಯೋಗ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ಜಿಲ್ಲೆಯು ಆಯುರ್ವೇದ ಕಾಲೇಜಿನ ಪ್ರಾಂಶಪಾಲರು, ಸ್ಕೌಟ್ಸ್ ಮತ್ತು ಗೈಡ್ಸ್, ಸೇವಾದಳ ಮುಖ್ಯಸ್ಥರು ಸಭೆಯಲ್ಲಿ ಉಪಸ್ಥಿತರಿದ್ದರು.

# ಪರಶುರಾಮಪುರದಲ್ಲಿ ಆರೋಗ್ಯ ತಪಾಸಣೆ

» **ಚಳ್ಳಕೆರೆ**

ಗ್ರಾಮೀಣ ಭಾಗಗಳಲ್ಲಿ ಉಚಿತ ಆರೋಗ್ಯ ಶಿಬಿರಗಳ ಮೂಲಕ ಗ್ರಾಮೀಣ ಜನರ ಆರೋಗ್ಯದ ವಿಚಾರದಲ್ಲಿ ಜಾಗೃತಿ ಮೂಡಿಸುತ್ತಿರುವ ಬಾಪೂಜಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಮತ್ತು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ತಜ್ಞ ವೈದ್ಯರು ಹಾಗೂ ಸಿಬ್ಬಂದಿ ವರ್ಗ ನಮ್ಮ ಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಂಡು ಜನರಿಗೆ ಆರೋಗ್ಯದ ಬಗ್ಗೆ ಮಾಹಿತಿಯೊಂದಿಗೆ ಉಚಿತವಾಗಿ ಚಿಕಿತ್ಸಾ ವಿಧಾನಗಳ ಬಗ್ಗೆ ತಿಳಿಸಿರುವುದು ಸಂತಸ ವಿಷಯವೆಂದು ಪರಶುರಾಮಪುರ ಗ್ರಾಮ ಪಂಚಾಯಿತಿ ಅಧ್ಯಕ್ಷ ಜಗಲೂರಸ್ವಾಮಿ ತಿಳಿಸಿದರು.

ಅವರು, ಗುರುವಾರ ಗ್ರಾಮ ಪಂಚಾಯಿತಿ ಆವರಣದಲ್ಲಿ ಬಾಪೂಜಿ ಆಯುರ್ವೇದಿಕ್ ಆಸ್ಪತ್ರೆ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಇಂದು ನಾವು ನಗರ ಮಟ್ಟದಲ್ಲಿ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಕಾಣುತ್ತೇವೆ. ಆದರೆ, ಕಳೆದ ಹಲವಾರು ವರ್ಷಗಳಿಂದ ಗ್ರಾಮೀಣ ಜನರಿಗೆ ಆಯುರ್ವೇದ ಚಿಕಿತ್ಸೆ ಆಸರೆಯಾಗಿತ್ತು. ಇತ್ತೀಚಿನ ದಿನಗಳಲ್ಲಿ ಆಯುರ್ವೇದ ಚಿಕಿತ್ಸೆಯಲ್ಲೂ ಸುಧಾರಣೆ ಕಂಡುಬಂದಿದ್ದು, ಆಯುರ್ವೇದ ಚಿಕಿತ್ಸೆ ಪಡೆಯಲು ಜನರು ಮುಂದಾಗಬೇಕು ಎಂದರು.



ಪ್ರಾಸ್ತಾವಿಕವಾಗಿ ಮಾತನಾಡಿದ ಬಾಪೂಜಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಪ್ರಾಂಶುಪಾಲ ಡಾ.ಸಿ.ಟಿ.ಬಸವರಾಜಪ್ಪ, ಪ್ರತಿವರ್ಷ ನಮ್ಮ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಸಹಯೋಗದಲ್ಲಿ ಗ್ರಾಮೀಣ ಭಾಗದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಸಿ ಸುತ್ತಮುತ್ತಲ ಹತ್ತಾರು ಗ್ರಾಮದ ಜನರಿಗೆ ಮಾಹಿತಿ ನೀಡಿ ಸಾಮೂಹಿಕವಾಗಿ ಅವರನ್ನು ತಪಾಸಣೆಗೆ ಒಳಪಡಿಸಲಾಗುತ್ತದೆ. ಎಲ್ಲಾ ವಿಭಾಗದಲ್ಲೂ ನುರಿತ ತಜ್ಞ ವೈದ್ಯರಿದ್ದು ಅವರೇ ತಪಾಸಣೆ ನಡೆಸುವರು. ಇಂದಿನ ಈ ಶಿಬಿರದಲ್ಲಿ ಸುತ್ತಮುತ್ತಲ 300ಕ್ಕೂ ಹೆಚ್ಚು ಜನರು ತಪಾಸಣೆಗೆ ಒಳಗಾಗಿರುವುದು ಸಂತಸತಂದಿದೆ ಎಂದರು. ಡಾ.ಸುಪ್ರೀಯಾ, ಡಾ.ವೀರಭದ್ರಗೌಡ, ಡಾ.ಕಲ್ಯಾಣಿ, ಡಾ.ಗಂಗಾ, ಡಾ.ಅರುಣ್, ಡಾ.ರಾಜೀವ್ ತಪಾಸಣೆ ನಡೆಸಿದರು. ಶಿಬಿರ ಮಾರ್ಗದರ್ಶಕರಾದ ಜಿ.ಬಾಲರೆಡ್ಡಿ, ಡಾ.ಲಕ್ಷ್ಮಿನಾರಾಯಣ್ ಉಪಸ್ಥಿತರಿದ್ದರು.

## ಅತಿ ಶೀಘ್ರ ಶುದ್ಧಕುಡಿಯುವ ನೀರು ಕೊಡುವ ನಿಟ್ಟಿನಲ್ಲಿ ಕಾಮಗಾರಿಗೆ ಚುರುಕು-ಶಾಸಕ ಗೋವಿಂದಪ್ಪ



» **ಹೊಸದುರ್ಗ**

ತಾಲೂಕಿನ ಜನರಿಗೆ ಅತಿ ಶೀಘ್ರದಲ್ಲಿಯೇ ಶುದ್ಧಕುಡಿಯುವ ನೀರು ಕೊಡುವ ನಿಟ್ಟಿನಲ್ಲಿ ಕಾಮಗಾರಿಗೆ ಚುರುಕು ಮುಟ್ಟಿಸಲು ಇಲಾಖೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಸೂಚನೆ ನೀಡಲಾಗಿದೆ ಎಂದು ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷ ಹಾಗೂ ಶಾಸಕ ಬಿಜಿ ಗೋವಿಂದಪ್ಪ ಹೇಳಿದರು.

ಅವರು ಹೊಸದುರ್ಗದಿಂದ ಲಕ್ಕುವಳ್ಳಿ ಡ್ಯಾಂವರೆಗೆ ಬಹು ಗ್ರಾಮ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯ ಭೌತಿಕ ಪ್ರಗತಿ ಪರಿಶೀಲನೆ ನಡೆಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಕಾಮಗಾರಿಯ ವೇಗ ಹೆಚ್ಚಿಸಲು 2 ತಿಂಗಳಿಗೊಮ್ಮೆ ಕಾಮಗಾರಿಯ ಸ್ಥಳ ಪರಿಶೀಲನೆ ಮಾಡಲಾಗುವುದುಎಂದರು.

2013–18ರ ಅವಯಲ್ಲಿದ್ದ ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲಿ ಗ್ರಾಮೀಣಾಭಿವೃದ್ಧಿ ಸಚಿವರಾಗಿದ್ದ ಹೆಚ್.ಕೆ. ಪಾಟೀಲ್ ಅವರು ತಾಲೂಕಿನಲ್ಲಿ ಕುಡಿಯುವ ನೀರಿನಲ್ಲಿ ಪ್ಲೋರೈಡ್ ಅಂಶ ಕಂಡ ಹಿನ್ನಲೆಯಲ್ಲಿ ಶುದ್ಧ ನೀರುಕೊಡುವ ಸಲುವಾಗಿ 600 ಕೋಟಿ ವೆಚ್ಚದಲ್ಲಿತಾಲೂಕಿನ 392 ಹಳ್ಳಿಗಳಿಗೂ ಕುಡಿಯುವ ನೀರು ಪೂರೈಸುವ ಸಲುವಾಗಿ ಬಹು ಗ್ರಾಮ ಕುಡಿಯುವ ನೀರಿನ ಯೋಜನೆಯನ್ನು ಮಂಜೂರು ಮಾಡಿಸಿ ಅನುದಾನವನ್ನು ನೀಡಿದ್ದರು. ಆದರೆ 2018 ರಲ್ಲಿ ನಮ್ಮ ಸರ್ಕಾರ ಬದಲಾದ ಹಿನ್ನಲೆಯಲ್ಲಿ ನಂತರ ಬಂದ ಬಿಜೆಪಿ ಸರ್ಕಾರ ಈ ಯೋಜನೆಯನ್ನು ಕಡೆಗಣನೆ ಮಾಡಿದ್ದರಿಂದ ಕಾಮಗಾರಿ ನೆನಗುದಿಗೆ ಬಿದ್ದಿದೆ.

## ಹೊಸದುರ್ಗ ಪಟ್ಟಣ ಸೇರಿದಂತೆ ಹಲವೆಡೆ ಇಂದು ವಿದ್ಯುತ್ ವ್ಯತ್ಯಯ

» **ಹೊಸದುರ್ಗ**

ಪಟ್ಟಣದ ಶಾಂತಿನಗರದಲ್ಲಿ ಅಪಾಯಕಾರಿ 11 ಕೆವಿ ವಿದ್ಯುತ್ ಮಾರ್ಗವನ್ನು ಸ್ಥಳಾಂತರ ಮಾಡುವ ಕಾಮಗಾರಿ ನಿರ್ವಹಿಸುವುದರಿಂದ ಹೊಸದುರ್ಗ ಪಟ್ಟಣ ಸೇರಿದಂತೆ ತಾಲೂಕಿನ ಕೆಲ್ಲೋಡು ಪಂಚಾಯಿತಿ ಮತ್ತು ಹುಣವಿನೋಡು ಪಂಚಾಯಿತಿಯ ವ್ಯಾಪ್ತಿಯಲ್ಲಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಜೂನ್ 14 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೂ ಸಹಾ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು ಸಾರ್ವಜನಿಕರು ಸಹಕರಿಸಬೇಕೆಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಹಕ ಇಂಜಿನಿಯರ್ ಕಿರಣ್‌ರೆಡ್ಡಿ.ಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಬಕ್ರಿದ್ ಹಬ್ಬದ ಶಾಂತಿಸಭೆ: ಚಳ್ಳಕೆರೆಯ ಹಿಂದೂ, ಮುಸ್ಲಿಂ ಬಂಧುಗಳು ಸೌಹಾರ್ದತೆಯ ಸಹಕಾರಿಗಳು: ಡಿವೈಎಸ್ಪಿ ರಾಜಣ್ಣ

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಚಳ್ಳಕೆರೆ ನಗರದಲ್ಲಿ ನಡೆಯುವ ಎಲ್ಲಾ ಉತ್ಸವಗಳು ಶಾಂತಿ, ಸೌಹಾರ್ಧತೆಯಿಂದ ಕೂಡಿವೆ. ಇಲ್ಲಿನ ಹಿಂದೂ, ಮುಸ್ಲಿಂ ಬಂಧುಗಳು ಶಾಂತಿ ಕಾಪಾಡುವ ನಿಟ್ಟಿನಲ್ಲಿ ಎಲ್ಲರಿಗೂ ಮಾದರಿಯಾಗಿದ್ದಾರೆ. ನಿಮ್ಮೆಲ್ಲರ ಸೌಹಾರ್ಧತೆ ಹೀಗೆ ಮುಂದುವರೆಯಲಿ ಎಂದು ಆಶಿಸುವುದಾಗಿ ಉಪವಿಭಾಗದ ಡಿವೈಎಸ್ಪಿ ಟಿ.ಬಿ.ರಾಜಣ್ಣ ತಿಳಿಸಿದರು.

ಅವರು, ಗುರುವಾರ ಪೊಲೀಸ್ ಠಾಣೆ ಆವರಣದಲ್ಲಿ ಜೂನ್ 17ರಂದು ನಡೆಯುವ ಬಕ್ರಿದ್ ಹಬ್ಬದ ಹಿನ್ನೆಲೆಯಲ್ಲಿ ಏರ್ಪಡಿಸಿದ್ದ ಶಾಂತಿಸಮಿತಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ಬಕ್ರಿದ್ ಹಬ್ಬದ ಆಚರಣೆಯ ಬಗ್ಗೆ ಸಾಕಷ್ಟು ಮಾಹಿತಿ ನೀಡಿದ್ದೀರ, ಯಾವುದೇ ಸಮಸ್ಯೆ ಎಂದೂ ಇಲ್ಲಿ ಉಂಟಾಗದು ಎಂಬುವುದು ನನ್ನ ಭಾವನೆ ಎಂದರು.





ಠಾಣಾ ವೃತ್ತ ನಿರೀಕ್ಷಕ ರಾಜಫಕೃದ್ದೀನ್‌ದೇಸಾಯಿ ಮಾತನಾಡಿ, ಜೂನ್ 17ರ ಬಕ್ರಿದ್ ಹಬ್ಬ ಆಚರಣೆಯ ಬಗ್ಗೆ ಎಲ್ಲರಲ್ಲೂ ಉತ್ಸಾಹವಿದೆ. ಪೊಲೀಸ್ ಇಲಾಖೆ ಸಹ ಕಾನೂನು ವ್ಯಾಪ್ತಿಯಲ್ಲಿ ಎಲ್ಲಾ ಸಹಕಾರವನ್ನು ನೀಡಲು ಸಿದ್ದವಿದೆ. ಯಾವುದೇ ಸಮಸ್ಯೆ ಇದ್ದರೆ ಕೂಡಲೇ ನನ್ನ ಗಮನಕ್ಕೆ ತನ್ನಿ ಎಂದರು.

ಬಕ್ರಿದ್ ಆಚರಣೆ ಕುರಿತು ಅತಿಕೂರ್‌ರೆಹಮಾನ್, ಕೆ.ದಾದಾಪೀರ್, ಬಷಿರ್ ಆಹಮ್ಮದ್, ಜುಬೇರ್, ಅನ್ವರ್‌ಮಾಸ್ಟರ್, ಅನಾಸ್ ಮುಂತಾದವರು ಮಾತನಾಡಿದರು.ನಗರದವಿವಿಧರಸ್ತೆಗಳಲ್ಲಿ ನಡೆಸುವ ಮೆರವಣಿಗೆಯ ಬಗ್ಗೆ ಮಾಹಿತಿ ನೀಡಿದರು. ಪಿಎಸ್‌ಐ ಕೆ.ಸತೀಶ್‌ನಾಯ್ಕ ಸ್ವಾಗತಿಸಿ ವಂದಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T